ಸಂಪಾದಕರು :
ಎಂ.ಎಸ್. ವಿಕಾಸ್

ಶನಿವಾರ, ಮೇ 04, 2024
ದಾವಣಗೆರೆ, ಪುಟ : 6 ರೂ : 5
ಸಂಪುಟ : 50 ಸಂಚಿಕೆ : 353 RNI : 27369/75

# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

1974 2023

janathavani@mac.com
www.janathavani.com
08192 254736 91642 99999




## ಪ್ರಜ್ವಲ್ ಮತ್ತು ರೇವಣ್ಣ ವಿರುದ್ಧ ಇನ್ನೆರಡು ಪ್ರಕರಣ

### ಅತ್ಯಾಚಾರ, ಅಪಹರಣದ ದೂರುಗಳು ದಾಖಲು



ಬೆಂಗಳೂರು, ಮೇ 3 – ಹಾಸನ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಅವರ ತಂದೆ ಹೆಚ್.ಡಿ. ರೇವಣ್ಣ ವಿರುದ್ಧ ಇನ್ನೆರಡು ಎಫ್.ಐ.ಆರ್.ಗಳು ದಾಖಲಾಗಿವೆ. ಈಗಾಗಲೇ ಪೆನ್‌ಡ್ರೈವ್ ಪ್ರಕರಣದಲ್ಲಿ ಸಿಲುಕಿರುವ ಉಭಯರ ಸಮಸ್ಯೆಗಳು ಇನ್ನಷ್ಟು ಹೆಚ್ಚಾಗಿವೆ. ಹಾಸನ, ಮೈಸೂರು ಹಾಗೂ ಬೆಂಗಳೂರುಗಳಲ್ಲಿ ಉಭಯರ ವಿರುದ್ಧ ಮೂರು ಎಫ್.ಐ.ಆರ್.ಗಳು ದಾಖಲಾಗಿವೆ.

ಪ್ರಜ್ವಲ್ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. (3ನೇ ಪುಟಕ್ಕೆ)

## ಪ್ರಜ್ವಲ್ ಪ್ರಕರಣ : ನ್ಯಾಯಾಧೀಶರ ಮುಂದೆ ಸಂತ್ರಸ್ತೆಯ ಹೇಳಿಕೆ

ಬೆಂಗಳೂರು, ಮೇ 3 - ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತ್ರಸ್ತೆಯೊಬ್ಬರು ನ್ಯಾಯಾಧೀಶರ ಮುಂದೆ ಹೇಳಿಕೆ ನೀಡಿದ್ದಾರೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂತ್ರಸ್ತ ಮಹಿಳೆಯೊಬ್ಬರು ನಿನ್ನೆ ದೂರು ನೀಡಿದ್ದು, ಎಸ್‌ಐಟಿಯವರು ಒತ್ತಾಯಪೂರ್ವಕವಾಗಿ ಸಂತ್ರಸ್ತೆಯಿಂದ ಹೇಳಿಕೆ ಪಡೆದಿದ್ದಾರೆ ಎಂಬ ಆರೋಪಕ್ಕೆ ಅವಕಾಶ ಆಗದಂತೆ, ಮ್ಯಾಜಿಸ್ಟ್ರೇಟ್ ಮುಂದೆಯೇ ನಿಯಮ 164ರಡಿ ಹೇಳಿಕೆ ಕೊಡಿಸಲಾಗಿದೆ ಎಂದರು.

ತನಿಖಾ ಸಂಸ್ಥೆಯಿಂದ ನೋಟಿಸ್ ಕೊಡಲಾಗಿದೆ, (3ನೇ ಪುಟಕ್ಕೆ)

## ನಗರಕ್ಕೆ ಇಂದು ಪ್ರಿಯಾಂಕ



ದಾವಣಗೆರೆ, ಮೇ 3- ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಅವರು ನಾಳೆ ದಿನಾಂಕ 4ರ ಶನಿವಾರ ಮಧ್ಯಾಹ್ನ 2ಕ್ಕೆ ನಗರದ ಹೈಸ್ಕೂಲ್ ಮೈದಾನದಲ್ಲಿ ಏರ್ಪಾಡಾಗಿರುವ ಲೋಕಸಭಾ ಕಾಂಗ್ರೆಸ್ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ. ಬಸವರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿದ ಅವರು, ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಪರ ಪ್ರಚಾರಕ್ಕಾಗಿ ಪ್ರಿಯಾಂಕ ಗಾಂಧಿ ಜತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಉಸ್ತುವಾರಿ ಕಾರ್ಯದರ್ಶಿ ಮಯೂರ್ ಎಸ್. ಜಯಕುಮಾರ್ (4ನೇ ಪುಟಕ್ಕೆ)


|| ಶ್ರೀ ಆಂಜನೇಯ ಸ್ವಾಮಿ ಪ್ರಸನ್ನ ||

**ಕೈಲಾಸ ಸಮಾರಾಧನೆ ಆಹ್ವಾನ**



ದಾವಣಗೆರೆ ಸಿಟಿ ಸರಸ್ವತಿ ನಗರ, ಬೀರೇಶ್ವರ ಬಡಾವಣೆ ವಾಸಿ **ಶ್ರೀಮತಿ ರಶ್ಮಿ ಮತ್ತು ಮಕ್ಕಳು** ಮಾಡುವ ವಿಜ್ಞಾಪನೆಗಳು. ದಿನಾಂಕ 26.04.2024ರ ಶುಕ್ರವಾರ ಬೆಳಿಗ್ಗೆ 3.15ಕ್ಕೆ ನನ್ನ ಪೂಜ್ಯ ಪತಿಯವರಾದ

**ಶ್ರೀ ರಮೇಶ್ ಡಿ.**
ಪ್ರಾಂಶುಪಾಲರು, ಎವಿಕೆ ಪದವಿ ಪೂರ್ವ ಕಾಲೇಜು, ದಾವಣಗೆರೆ.

ಇವರು ದೈವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ **ಕೈಲಾಸ ಸಮಾರಾಧನೆಯನ್ನು** ದಿನಾಂಕ 04.05.2024ರ ಶನಿವಾರ ಬೆಳಿಗ್ಗೆ 10.30ಕ್ಕೆ ದಾವಣಗೆರೆ ಸಿಟಿ ಸರಸ್ವತಿ ನಗರ, ಬೀರೇಶ್ವರ ಬಡಾವಣೆ, ಕಾಳಿದಾಸ ಸರ್ಕಲ್ ಹತ್ತಿರದ ಮೃತರ ಸ್ವಗೃಹದಲ್ಲಿ ನೆರವೇರಿಸಲು ಗುರು - ಹಿರಿಯರು ನಿಶ್ಚಯಿಸಿರುತ್ತಾರೆ. ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು : ಶ್ರೀಮತಿ ರಶ್ಮಿ ಮತ್ತು ಮಕ್ಕಳು ಹಾಗೂ ಬಂಧು-ಮಿತ್ರರು. ಮೊ. 99865-21396

ವಿ.ಸೂ : ಇದನ್ನೇ ವೈಯಕ್ತಿಕ ಆಹ್ವಾನವೆಂದು ಭಾವಿಸಿ ಆಗಮಿಸಲು ಕೋರಿದೆ.



## ಕಾಣೆಯಾಗಿದ್ದಾರೆ



ದಾವಣಗೆರೆ ಜಯನಗರ 'ಸಿ' ಬ್ಲಾಕ್, ಡೋರ್ ನಂ. 776/13 ವಾಸಿ, ಎಸ್. ಚಂದ್ರಪ್ಪ ಇವರ ಪತ್ನಿ **ಅನುಸೂಯಮ್ಮ** ವಯಸ್ಸು 65 ವರ್ಷ, ಇವರು ದಿನಾಂಕ 01.05.2024ರ ಬುಧವಾರ ಸಂಜೆ 6.30ಕ್ಕೆ ಮನೆಯಿಂದ ಹೊರಗೆ ಹೋದವರು ಪುನಃ ವಾಪಾಸ್ ಮನೆಗೆ ಬಂದಿರುವುದಿಲ್ಲ. ಇವರು ಮಾನಸಿಕವಾಗಿ ಅಸ್ವಸ್ಥರಾಗಿದ್ದು, ಕನ್ನಡ ಮಾತನಾಡಲು ಬರುತ್ತದೆ. ನೀಲಿ ಸೀರೆ, ಕೆಂಪು ಬ್ಲೌಸ್ ತೊಟ್ಟಿರುತ್ತಾರೆ. ಬಿಳಿ ಕೂದಲು ಹೊಂದಿರುತ್ತಾರೆ. ಇವರನ್ನು ಯಾರಾದರೂ ನೋಡಿದಲ್ಲಿ ಹತ್ತಿರದ ಕೆ.ಟಿ.ಜೆ. ನಗರದ ಪೊಲೀಸ್ ಠಾಣೆಯಗಾಗಲೀ ಅಥವಾ ಈ ಕೆಳಗಿನ ಮೊಬೈಲ್ ನಂಬರ್‌ಗಳಿಗಾಗಲೀ ತಿಳಿಸಬೇಕಾಗಿ ವಿನಂತಿ.

ಹುಡುಕಿ ಕೊಟ್ಟವರಿಗೆ ಸೂಕ್ತ ಬಹುಮಾನ ಕೊಡಲಾಗುವುದು.

ಮೊ. : 63660 75696, 90082 07222



## ಈದರ ಸುಬ್ಬಾರಾವ್ ನಿಧನ



ಹರಿಹರ ತಾಲ್ಲೂಕು ಸತ್ಯನಾರಾಯಣಪುರ ಕ್ಯಾಂಪ್ ವಾಸಿ

**ಶ್ರೀ ಈದರ ಸುಬ್ಬಾರಾವ್**

ಅವರು ದಿನಾಂಕ : 01.05.2024 ಬುಧವಾರ ರಾತ್ರಿ 12.20ಕ್ಕೆ ದೈವಾಧೀನರಾದರು. ಮೃತರ ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯನ್ನು 04.05.2024ರ ಶನಿವಾರ ಬೆಳಿಗ್ಗೆ 8.30ಕ್ಕೆ ಮೃತರ ಜಮೀನಿನಲ್ಲಿ ನೆರವೇರಿಸಲಾಗುವುದು.

ದುಃಖತಪ್ತರು :
ಶ್ರೀಮತಿ ಸಿರಿಶಾ ರಾಣಿ, ಈದರ ದುರ್ಗಾಪ್ರಸಾದ್ & ಮಕ್ಕಳು
ಶ್ರೀಮತಿ ಎಂ. ಸತ್ಯವತಿ, ಶ್ರೀ ಎಂ. ನಾಗೇಶ್ವರರಾವ್
ಶ್ರೀಮತಿ ವರಲಕ್ಷ್ಮೀ, ಶ್ರೀ ವಿ. ಶ್ರೀನಿವಾಸ ಜನಾರ್ದನರಾವ್
ಶ್ರೀಮತಿ ಪದ್ಮಾವತಿ ಶ್ರೀ ದಿ. ರಾಂಬಾಬು
ಹಾಗೂ ಸತ್ಯನಾರಾಯಣಪುರ ಕ್ಯಾಂಪ್ ನಿವಾಸಿಗಳು




# 10 ರಂದು ನಗರದಲ್ಲಿ 113ನೇ ಶ್ರೀ ಬಸವೇಶ್ವರರ ಜಯಂತ್ಯೋತ್ಸವ



ದಾವಣಗೆರೆ, ಮೇ 3- ನಗರದ ದೊಡ್ಡಪೇಟೆ ಶ್ರೀ ಬಸವೇಶ್ವರ ಸೇವಾ ಸಂಘದಿಂದ 113ನೇ ಶ್ರೀ ಜಗಜ್ಯೋತಿ ಬಸವೇಶ್ವರರ ಜಯಂತ್ಯೋತ್ಸವ ಕಾರ್ಯಕ್ರಮದ ಪ್ರಯುಕ್ತ ಇದೇ ದಿನಾಂಕ 10ರ ಶುಕ್ರವಾರ ಶ್ರೀ ಬಸವೇಶ್ವರರ ಬೆಳ್ಳಿ ಪುತ್ಥಳಿಯ ಭವ್ಯ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ.

ದಿನಾಂಕ 9ರ ಗುರುವಾರ ಬೆಳಿಗ್ಗೆ ವಚನಾಭಿಷೇಕ ಮತ್ತು ಗಣಾರಾಧನೆ, ರಾತ್ರಿ 7.30ಕ್ಕೆ ಚೌಕಿಪೇಟೆ ಶ್ರೀ ಗುರು ಶಿವಯೋಗಿ ಬಕ್ಕೇಶ್ವರ ಮಹಾಸ್ವಾಮಿ ಭಜನಾ ಸಂಘದಿಂದ ಭಜನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ದಿನಾಂಕ 10ರ ಶುಕ್ರವಾರ ಬೆಳಿಗ್ಗೆ 9 ಗಂಟೆಗೆ ಮಹಿಳೆಯರಿಂದ ತೊಟ್ಟಿಲು ಪೂಜೆ ನಂತರ ಸಂಜೆ ಅಡ್ಡಪಲ್ಲಕ್ಕಿಯಲ್ಲಿ ಶ್ರೀ ಬಸವೇಶ್ವರರ ಬೆಳ್ಳಿ ಪುತ್ಥಳಿಯ ಭವ್ಯ ಮೆರವಣಿಗೆ ನಡೆಯಲಿದೆ. ದಿನಾಂಕ 11ರ ಶನಿವಾರ ಸಾರ್ವಜನಿಕರಿಗೆ ಅನ್ನ ದಾಸೋಹ ಏರ್ಪಡಿಸಲಾಗಿತ್ತು, ಹಿರಿಯ ಕೈಗಾರಿಕೋದ್ಯಮಿ ಅಥಣಿ ಎಸ್. ವೀರಣ್ಣ ಮತ್ತು ಸಹೋದರರು ದಾಸೋಹ ಸೇವಾರ್ಥಿಗಳಾಗಿದ್ದಾರೆ.

# ಗ್ಯಾರಂಟಿಗಳು ಅಭ್ಯರ್ಥಿಗಳ ಗೆಲುವಿಗೆ ಸಹಕಾರಿ



## ಮಲೇಬೆನ್ನೂರಿನಲ್ಲಿ ಸೌಮ್ಯ ರೆಡ್ಡಿ ಅಭಿಮತ

ಮಲೇಬೆನ್ನೂರು, ಮೇ 3- ಕಾಂಗ್ರೆಸ್ ಗ್ಯಾರಂಟಿಗಳ ಸೌಲಭ್ಯ ಪಡೆದುಕೊಳ್ಳುತ್ತಿರುವ ಬಹುತೇಕ ಜನರು ಕಾಂಗ್ರೆಸ್ ಅಭ್ಯರ್ಥಿಗಳನ್ನು ಬೆಂಬಲಿಸಲಿದ್ದಾರೆಂದು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹಾಗೂ ಮಾಜಿ ಶಾಸಕ ಸೌಮ್ಯ ರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದರು.

ಅವರು, ಬುಧವಾರ ಮಲೇಬೆನ್ನೂರು ಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಪರ ಪ್ರಚಾರದಲ್ಲಿ ಪಾಲ್ಗೊಂಡು ಮಾತನಾಡಿದರು.

ಕಾಂಗ್ರೆಸ್ ಗ್ಯಾರಂಟಿಗಳು ಎಲ್ಲಾ ವರ್ಗಗಳ ಜನರಿಗೆ ಅನುಕೂಲವಾಗಿದ್ದು, ಇದರ ಪ್ರಯೋಜನ ಪಡೆಯುತ್ತಿರುವ ಎಲ್ಲಾ ಜನರು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಿ, ಅಭೂತ ಪೂರ್ವ ಗೆಲುವು ತಂದು ಕೊಡಲಿದ್ದಾರೆ.

ದಾವಣಗೆರೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ಪರ ಕ್ಷೇತ್ರದಲ್ಲಿ ಬಹಳ ಉತ್ತಮ ವಾತಾವರಣವಿದ್ದು, ಜನರು ಅವರ ವ್ಯಕ್ತಿತ್ವವನ್ನು ಮೆಚ್ಚಿ ಪಕ್ಷಾತೀತವಾಗಿ ಆಯ್ಕೆ ಮಾಡಲಿದ್ದಾರೆಂಬ ಮಾತು ಎಲ್ಲೆಡೆ ಕೇಳಿ ಬರುತ್ತಿವೆ ಎಂದು ಸೌಮ್ಯ ರೆಡ್ಡಿ ಹೇಳಿದರು.

ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್, ಜಿ.ಪಂ. ಮಾಜಿ ಸದಸ್ಯರಾದ ಬೆಣ್ಣೆಹಳ್ಳಿ ಹಾಲೇಶಪ್ಪ, ಬಿ.ಎಂ.ವಾಗೀಶ್ ಸ್ವಾಮಿ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ನಿಖಿಲ್ ಕೊಂಡಜ್ಜಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಬಿ. ಅಬೀದ್ ಅಲಿ, ಮುಖಂಡರಾದ ಕುಂಬಳೂರು ವಿರೂಪಾಕ್ಷಪ್ಪ, ಜಿ.ಮಂಜುನಾಥ್ ಪಟೇಲ್, ಬಿ.ವೀರಯ್ಯ, ಸೈಯದ್ ಜಾಕೀರ್, ಪೂಜಾರ್ ಹಾಲೇಶಪ್ಪ, ತಳಸದ ಬಸವರಾಜ್, ಪಿ.ಬಿ.ವೀರಪ್ಪ, ಎ.ಆರೀಫ್ ಅಲಿ, ಬಿ. ಮಹಾರುದ್ರಪ್ಪ, ಸಿಅಬ್ದುಲ್ ಹಾದಿ, ಬಿ.ರಫೀಕ್ ಸಾಬ್, ಎಂ.ಬಿ.ಫೈಜು, ಯರೇಚಿಕ್ಕನಹಳ್ಳಿ ಚಂದ್ರಶೇಖರ್, ಸಜ್ಜು, ಪುರಸಭೆ ಸದಸ್ಯರಾದ ಗೌಡ್ರ ಮಂಜಣ್ಣ, ಬಿ.ಮಂಜುನಾಥ್, ಖಲೀಲ್, ನಯಾಜ್, ಕೆ.ಜಿ.ಲೋಕೇಶ್, ಸಾಬೀರ್ ಅಲಿ, ದಾದಾಪೀರ್, ಭೋವಿ ಶಿವು, ಭಾನುವಳ್ಳಿ ಸುರೇಶ್, ಕೆ.ಪಿ.ಗಂಗಾಧರ್, ಭೋವಿ ಕುಮಾರ್, ಎಂ.ಬಿ.ರುಸ್ತುಂ, ಚಮನ್ ಷಾ, ಪಿ.ಆರ್.ರಾಜು, ಪಾಳೇಗಾರ ನಾಗರಾಜ್, ಕಣ್ಣಾಳ್ ಧರ್ಮಣ್ಣ, ಕಣ್ಣಾಳ್ ಹನುಮಂತಪ್ಪ, ಪಿ.ಆರ್.ಕುಮಾರ್, ಪಿ.ಹೆಚ್.ಶಿವಕುಮಾರ್, ಯುನೂಸ್, ಎ.ಕೆ. ಲೋಕೇಶ್, ಎ.ಕೆ.ನಾಗರಾಜ್, ಎ.ಕೆ.ಪ್ರಕಾಶ್, ಎ.ಕೆ.ನರಸಿಂಹಪ್ಪ ಸೇರಿದಂತೆ ಇನ್ನೂ ಅನೇಕರು ಈ ವೇಳೆ ಹಾಜರಿದ್ದರು.

# ಕಾಂಗ್ರೆಸ್ ಗ್ಯಾರಂಟಿಗಳು ಲೋಕಸಭಾ ಚುನಾವಣೆ ಮೇಲೆ ಪರಿಣಾಮ ಬೀರಲ್ಲ

## ಜಿಗಳಿಯಲ್ಲಿ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಸ್ಪಷ್ಟನೆ

ಮಲೇಬೆನ್ನೂರು, ಮೇ 3- ಕಾಂಗ್ರೆಸ್ ಗ್ಯಾರಂಟಿಗಳು ಲೋಕಸಭಾ ಚುನಾವಣೆ ಮೇಲೆ ಪರಿಣಾಮ ಬೀರಲ್ಲ ಎಂದು ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಹೇಳಿದರು.

ಶುಕ್ರವಾರ ಜಿಗಳಿ ಗ್ರಾಮದಲ್ಲಿ ಬಿಜೆಪಿ ಮುಖಂಡ ಎನ್.ಆರ್.ಇಂದೂಧರ್ ಅವರ ಮನೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ರಾಜ್ಯದಲ್ಲಿ ಈ ಬಾರಿ ಮಹಿಳೆಯರು ಹೊರ ಬಂದು ಏನೂ ಕೇಳುತ್ತಿಲ್ಲ. ಹಾಗಂತ ಎಲ್ಲಾ ಮಹಿಳೆಯರು ಗ್ಯಾರಂಟಿಗಳಿಂದಾಗಿ ಕಾಂಗ್ರೆಸ್ ಬೆಂಬಲಿಸುತ್ತಿದ್ದಾರೆ ಎಂದರ್ಥ ಅಲ್ಲ ಎಂದು ಸ್ಪಷ್ಟಪಡಿಸಿದ ಅವರು, ದೇಶದ ಭದ್ರತೆ, ಅಭಿವೃದ್ಧಿ ದೃಷ್ಟಿಯಿಂದ ಜನ ಮೋದಿಯವರನ್ನು ಈ ಬಾರಿಯೂ ಬೆಂಬಲಿಸುವ ಸಂಪೂರ್ಣ ವಿಶ್ವಾಸ ನಮಗಿದೆ ಎಂದರು.

ತುಮಕೂರಿನಲ್ಲಿ ವಿ.ಸೋಮಣ್ಣ ಅವರಿಗೆ ಟಿಕೆಟ್ ನೀಡಿದಾಗ ವಿರೋಧ ಮಾಡಿದ್ದು ನಿಜ. ನಂತರ ವರಿಷ್ಠರ ಸೂಚನೆ ಮೇರೆಗೆ ಮತ್ತು ಪಕ್ಷದ ಹಿತದೃಷ್ಠಿಯಿಂದ ಕೆಲಸ ಮಾಡಿದ್ದೇನೆ ಎಂದು ತಿಳಿಸಿದ ಮಾಧುಸ್ವಾಮಿ ಅವರು, ಮೈಸೂರು, ತುಮಕೂರು ಮತ್ತು ದಾವಣಗೆರೆಯಲ್ಲಿ ಜೆಡಿಎಸ್ ಬೆಂಬಲದೊಂದಿಗೆ ಬಿಜೆಪಿಗೆ ಅನುಕೂಲವಾಗಲಿದೆ ಎಂದರು.

ಮೋದಿ ಅಲೆ ಎಲ್ಲಾ ಕಡೆ ಇದ್ದು, ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಸಹಜವಾಗಿಯೇ ಅನುಕೂಲವಾಗಲಿದೆ. ರಾಜ್ಯದಲ್ಲಿ ಕಳೆದ ಬಾರಿ ಚುನಾವಣೆಯಲ್ಲಿ ಸುಮಲತಾ ಅವರನ್ನು ಸೇರಿ 27 ಕ್ಷೇತ್ರಗಳಲ್ಲಿ ಗೆದ್ದಿದ್ದೇವು. ಈ ಬಾರಿ 28 ಸ್ಥಾನಗಳಲ್ಲೂ ಗೆಲ್ಲುವ ವಿಶ್ವಾಸವಿದೆ ಎಂದು ಮಾಧುಸ್ವಾಮಿ ಅವರು, ಕೇಂದ್ರದಲ್ಲಿ ಸರ್ಕಾರ ರಚಿಸುವಷ್ಟು ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷ ಅಭ್ಯರ್ಥಿಗಳನ್ನು ನಿಲ್ಲಿಸಿಲ್ಲ. ಹಾಗಾಗಿ ಅವರು ಸ್ವಾತಂತ್ರ್ಯವಾಗಿ ಅಧಿಕಾರಕ್ಕೆ ಬರುವ ಪ್ರಶ್ನೆಯೇ ಇಲ್ಲ ಎಂದು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು.

ಪ್ರಜ್ವಲ್‌ರೇವಣ್ಣ ಅವರು ನಡೆಸಿದ್ದಾರೆನ್ನಲ್ಲಾದ ಲೈಂಗಿಕ ಶೋಷಣೆಯನ್ನು ಮಾನವೀಯತೆ ದೃಷ್ಠಿಯಿಂದ ಖಂಡಿಸುತ್ತೇನೆ. ಈ ಪ್ರಕರಣದಲ್ಲಿ ಸಾಕ್ಷ್ಯ ಒದಗಿಸುವುದು ಕಷ್ಟ ಎಂಬ ಮಾತು ಕೇಳಿ ಬರುತ್ತಿವೆ ಎಂದು ಮಾಧುಸ್ವಾಮಿ ಹೇಳಿದರು.



### ಹರಿಹರ ಕ್ಷೇತ್ರದಲ್ಲಿ ಬಿಜೆಪಿ ಪರ ಮಾಜಿ ಸಚಿವ ಮಾಧುಸ್ವಾಮಿ ಪ್ರಚಾರ

ನಂತರ ಮಾಧುಸ್ವಾಮಿ ಅವರು, ಜಿ. ಬೇವಿನಹಳ್ಳಿ, ಹಳ್ಳಿಹಾಳ್, ಕೊಕ್ಕನೂರು, ಮೂಗಿನಗೊಂದಿ, ಹಿಂಡಸಘಟ್ಟೆ, ಗೋವಿನಹಾಳ್, ನಂದಿಗುಡಿ, ಉಕ್ಕಡಗಾತ್ರಿ, ವಾಸನ, ಪಾಳ್ಯ, ಕೆ.ಎನ್.ಹಳ್ಳಿ, ಎಕ್ಕೆಗೊಂದಿ, ನಂದಿತಾವರೆ ಗ್ರಾಮಗಳಲ್ಲಿ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ ಪರ ಪ್ರಚಾರ ನಡೆಸಿದರು.

ಶಾಸಕ ಬಿ.ಪಿ.ಹರೀಶ್, ಬಿಜೆಪಿ ಮುಖಂಡ ಚಂದ್ರಶೇಖರ್ ಪೂಜಾರ್, ತಾ.ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಹಿಂಡಸಘಟ್ಟೆ ಲಿಂಗರಾಜ್, ತಾ. ಬಿಜೆಪಿ ಕಾರ್ಯದರ್ಶಿ ಆದಾಪುರ ವೀರೇಶ್, ನಂದಿತಾವರೆಯಲ್ಲಿ ಮಂಜುಳಮ್ಮ, ಎನ್.ಪಿ. ಬಸವಲಿಂಗಪ್ಪ, ಎನ್.ಪಿ.ವಿಜಯಕುಮಾರ್, ಜಿ.ಪಿ.ಹನುಮಗೌಡ ಮತ್ತಿತರರು ಈ ವೇಳೆ ಹಾಜರಿದ್ದರು.

# ದೇವಾಂಗ ಸಮಾಜದ ಜಗದ್ಗುರುಗಳ ಆಶೀರ್ವಾದ ಪಡೆದ ಎಸ್ಸೆಸ್ಸೆಂ



ದಾವಣಗೆರೆ, ಮೇ 3- ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅವರು ದೇವಾಂಗ ಸಮಾಜದ ಶ್ರೀ ಗಾಯತ್ರಿ ಪೀಠ, ಹೇಮಕೂಟ, ಹಂಪಿಯ ಜಗದ್ಗುರು ಶ್ರೀ ದಯಾನಂದಪುರಿ ಮಹಾಸ್ವಾಮೀಜಿ ಆಶೀರ್ವಾದ ಪಡೆದರು.

ದೇವಾಂಗ ಸಮಾಜದವರು ಹಿಂದಿನಿಂದಲು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸುತ್ತಾ ಬಂದಿದ್ದು, ಈ ಬಾರಿಯು ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಮತವನ್ನು ನೀಡಿ ಗೆಲ್ಲಿಸಬೇಕು ಎಂದರು.

ಸಮಾಜದ ಬಾಂಧವರು ಕುಟುಂಬ ಸಮೇತರಾಗಿ ಮತಗಟ್ಟೆಗೆ ಆಗಮಿಸಿ ಪ್ರಭಾ ಮಲ್ಲಿಕಾರ್ಜುನ ಅವರಿಗೆ ಮತವನ್ನು ಹಾಕಿ ಸಮಾಜದ ಇನ್ನಷ್ಟು ಅಭಿವೃದ್ಧಿ ಸಹಕರಿಸಿ ಎಂದರು. ಈ ವೇಳೆ ಸಮಾಜದ ಮುಖಂಡರಾದ ರಮೇಶ್ ಅವರು ಸಚಿವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

# ಇಂದು ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರ ಹಾಗೂ ಜಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಮತ ಯಾಚನೆ : ಗಾಯತ್ರಿ



ದಾವಣಗೆರೆ, ಮೇ 3 - ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ್ ಅವರು ಏ.4 ರಂದು ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರ ಹಾಗೂ ಜಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮತಯಾಚನೆ ನಡೆಸಲಿದ್ದಾರೆ. ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರದಲ್ಲಿ ಬೆಳಗ್ಗೆ 7.30ಕ್ಕೆ ಶಾಮನೂರು, 8ಕ್ಕೆ 33ನೇ ವಾರ್ಡ್ ನಿಟ್ಟುವಳ್ಳಿ ದುರ್ಗಾಂಬಿಕಾ ಬಡಾವಣೆ, 9ಕ್ಕೆ 34ನೇ ವಾರ್ಡ್ ಶಿವಕುಮಾರಸ್ವಾಮಿ ಬಡಾವಣೆ, 10ಕ್ಕೆ 36ನೇ ವಾರ್ಡ್ ನ ಲಿಂಗೇಶ್ವರ ಸರ್ಕಲ್, 11ಕ್ಕೆ ತರಳಬಾಳು ಬಡಾವಣೆ 4ನೇ ಕ್ರಾಸ್, 12ಕ್ಕೆ ವಿನಾಯಕ ಬಡಾವಣೆಯಲ್ಲಿ ಮತಯಾಚನೆ ಮಾಡಲಿದ್ದಾರೆ.

ಜಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಧ್ಯಾಹ್ನ 1ಕ್ಕೆ ಕ್ಯಾಸೇನಹಳ್ಳಿ, 1.45ಕ್ಕೆ ಹೊಸಕೆರೆ, 3ಕ್ಕೆ ಕೆಚ್ಚೇನಹಳ್ಳಿ, 4.30ಕ್ಕೆ ಜಗಳೂರು ನಗರದಲ್ಲಿ ರೋಡ್ ಶೋ ಮೂಲಕ ಮತ ಯಾಚಿಸಲಿದ್ದಾರೆ.

ಮಂಡಲಗಳ ಅಧ್ಯಕ್ಷರು, ಪದಾಧಿಕಾರಿಗಳು, ಬೂತ್ ಮಟ್ಟದ ಅಧ್ಯಕ್ಷರು, ಸದಸ್ಯರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

# ದೇಶದ ಭದ್ರತೆಗಾಗಿ ದೇಶಕ್ಕೆ ನರೇಂದ್ರ ಮೋದಿ ಅನಿವಾರ್ಯ

## ಹೊನ್ನಾಳಿಯಲ್ಲಿ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಪರ ಪ್ರಚಾರದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಮರ್ಥನೆ

ಹೊನ್ನಾಳಿ, ಮೇ 3 - ದೇಶದ ಭದ್ರತೆಗಾಗಿ ದೇಶಕ್ಕೆ ನರೇಂದ್ರ ಮೋದಿ ಅನಿವಾರ್ಯವಾಗಿದ್ದು, ಮೂರನೇ ಬಾರಿಗೆ ನರೇಂದ್ರ ಮೋದಿ ಪುನಃ ದೇಶದ ಪ್ರಧಾನಿಯಾಗಿ ಭದ್ರತೆಯೊಂದಿಗೆ ದೇಶದ ಅಭಿವೃದ್ಧಿ ಮಾಡುವುದು ಗ್ಯಾರಂಟಿ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅಭಿಪ್ರಾಯಪಟ್ಟರು.

ಗುರುವಾರ ಪಟ್ಟಣದಲ್ಲಿ ತಾಲ್ಲೂಕು ಬಿಜೆಪಿ ಮಂಡಳಿ ವತಿಯಿಂದ ದಾವಣಗೆರೆ ಲೋಕಸಭಾ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಪರ ಮತಯಾಚನೆ ಸಂಬಂಧ ಹಮ್ಮಿಕೊಂಡಿದ್ದ ಬೃಹತ್ ರೋಡ್‌ಶೋ ಕಾರ್ಯಕ್ರಮದ ನಂತರ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವ ಎಲ್ಲಾ ಫಲಾನುಭವಿಗಳಿಗೆ ಕೇಂದ್ರದಿಂದ 5 ಕೆಜಿ ಅಕ್ಕಿ ವಿತರಿಸಲಾಗುತ್ತಿದೆ. ದೇಶದ 10 ಕೋಟಿ ಬಡವರಿಗೆ ಗ್ಯಾಸ್ ಸಿಲಿಂಡರ್ ವ್ಯವಸ್ಥೆ ಇರಲಿಲ್ಲ, ನರೇಂದ್ರಮೋದಿ ಅಧಿಕಾರಕ್ಕೆ ಬಂದ ನಂತರ ಎಲ್ಲಾ ಬಡವರ ಮನೆಯಲ್ಲಿ ಗ್ಯಾಸ್ ಸಿಲಿಂಡರ್ ಸಂಪರ್ಕ ಹೊಂದುವಂತೆ ಮಾಡಿ ಹೊಗೆ ರಹಿತ ಅಡುಗೆ ಮನೆ ಮಾಡಲಾಯಿತು. 28 ಸಾವಿರ ಹಳ್ಳಿಗಳ ಮನೆಗಳಲ್ಲಿ ವಿದ್ಯುತ್ ಸಂಪರ್ಕ ಇರಲಿಲ್ಲ. ಕೇಂದ್ರ ಸರ್ಕಾರ ಎಲ್ಲಾ 28 ಸಾವಿರ ಹಳ್ಳಿಗಳ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ವ್ಯವಸ್ಥೆ ಮಾಡಿತು.



ಈ ಹಿಂದೆ ಆಡಳಿತ ನಡೆಸಿದ ಕಾಂಗ್ರೆಸ್ ಸರ್ಕಾರದ 50 ವರ್ಷಗಳ ಅವಧಿಯಲ್ಲಿ ದೇಶದಾದ್ಯಂತ ಕೇವಲ 74 ಏರ್‌ಪೋರ್ಟ್‌ಗಳಿದ್ದವು. ನರೇಂದ್ರ ಮೋದಿಯವರ 10 ವರ್ಷಗಳ ಆಡಳಿತಾವಧೀಯಲ್ಲಿ 74 ಏರ್‌ಪೋರ್ಟ್‌ಗಳು ನಿರ್ಮಾಣವಾಗಿವೆ, ಈ ಎಲ್ಲಾ ಅಂಶಗಳು ದೇಶದಲ್ಲಿ ಅಭಿವೃದ್ಧಿಯಲ್ಲವೇ? ಎಂದು ಪ್ರಶ್ನಿಸಿದರು.

ಇಂದು ದೇಶದ ಗಡಿ ಕಾಯುವ ಸೈನಿಕರು ಕೂಡಾ ನರೇಂದ್ರ ಮೋದಿ ಮತ್ತೆ ಪ್ರಧಾನಿಯಾಗಲಿ ಎಂದು ಬಯಸುತ್ತಾರೆ, ಇದಕ್ಕೆ ಕಾರಣ ಯುಪಿಎ ನೇತೃತ್ವದ ಸರ್ಕಾರದಲ್ಲಿ ಸೈನಿಕರು ಭಯೋತ್ಪಾದಕರ ವಿರುದ್ಧ, ಗಡಿಭಾಗದಲ್ಲಿ ನುಸುಳುವ ವಿರೋಧಿಗಳಿಗೆ ಒಂದು ಗುಂಡು ಹೊಡೆಯಲು ಕೇಂದ್ರ ಸರ್ಕಾರದ ಆದೇಶ ಕಾಯಬೇಕಿತ್ತು. ನರೇಂದ್ರಮೋದಿ ಭಯೋತ್ಪಾದಕರಿಗೆ, ಗಡಿ ಭಾಗದ ನುಸುಳುಕೋರರಿಗೆ ಒಂದಲ್ಲ ನಾಲ್ಕು ಗುಂಡು ಹೊಡೆದು ಬನ್ನಿ ಎಂದು ಸೈನಿಕರಿಗೆ ಹುರಿದುಂಬಿಸಿದ್ದಾರೆ ಇದು ನರೇಂದ್ರ ಮೋದಿಯವರ ಎದೆಗಾರಿಕೆ ಎಂದು ಬಣ್ಣಿಸಿದರು.

ಇದುವರೆಗೂ ಯಾವ ಸರ್ಕಾರಗಳ ಕೈಯಲ್ಲಿ ಆಗದಂತಹ ಕಾಶ್ಮೀರ ಸಮಸ್ಯೆಯನ್ನು ಅತ್ಯಂತ ದಿಟ್ಟ ನಿರ್ಧಾರದಿಂದ ಬಗೆಹರಿಸಲಾಗಿದೆ. ಕಾಶ್ಮೀರ ರಾಜ್ಯಕ್ಕೆ ಇದ್ದ ವಿಶೇಷ ಸ್ಥಾನಮಾನ ಹೊಂದಿದ್ದ ಕಾಯ್ದೆ 370ನ್ನು ರದ್ದುಗೊಳಿಸಿದ್ದು, ಬಹುದೊಡ್ಡ ಸಾಧನೆಯಾಗಿದೆ. ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಅವರಿಗೆ ಮತ ನೀಡಿ ಎಂದು ಮನವಿ ಮಾಡಿದರು.

ದಾವಣಗೆರೆ ಲೋಕಸಭಾ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಮಾತನಾಡಿ, 50 ವರ್ಷಗಳಲ್ಲಿ ಮಾಡಬೇಕಾದ ಅಭಿವೃದ್ಧಿಯನ್ನು ಕೇವಲ 10 ವರ್ಷಗಳಲ್ಲಿ ನರೇಂದ್ರ ಮೋದಿ ಮಾಡಿದ್ದಾರೆ. ಇದು ಕೇವಲ ಟ್ರಯಲ್, ಮುಂದೆ ಪೂರ್ಣ ಪ್ರಮಾಣದ ಅಭಿವೃದ್ಧಿ ಪಿಕ್ಚರ್ ಬಾಕಿ ಇದೆ ಎಂದು ಮೋದಿಯವರು ಹೇಳಿದ್ದಾರೆ. ಪೂರ್ಣ ಪಿಕ್ಚರ್ ವೀಕ್ಷಿಸಿ, ಆನಂದಿಸಲು ಕಮಲಕ್ಕೆ ಮತ ಚಲಾಯಿಸಿ ಎಂದು ಮನವಿ ಮಾಡಿದರು.

ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮಾತನಾಡಿ, ಸೂರ್ಯ, ಚಂದ್ರರಿರುವುದು ಎಷ್ಟು ಸತ್ಯವೋ ಲೋಕಸಭಾ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಅವರ ಗೆಲುವು ಅಷ್ಟೇ ಸತ್ಯ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ತಾಲ್ಲೂಕು ಬಿಜೆಪಿ ಮಂಡಲ ಅಧ್ಯಕ್ಷ ಜೆ.ಕೆ.ಸುರೇಶ್ ಸ್ವಾಗತಿಸಿದರು. ಇದಕ್ಕು ಮುನ್ನ ಪಟ್ಟಣದ ಸಂಗೊಳ್ಳಿರಾಯಣ್ಣ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ರೋಡ್‌ಶೋ ನಡೆಸಲಾಯಿತು.

# ದಕ್ಷಿಣ ಕ್ಷೇತ್ರದಲ್ಲಿ ಇಂದು ಕಾಂಗ್ರೆಸ್ ಅಭ್ಯರ್ಥಿ ಪ್ರಭಾ, ಎಸ್ಸೆಸ್ ಜಂಟಿ ಪ್ರಚಾರ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ 1, 5, 6 ಮತ್ತು 45ನೇ ವಾರ್ಡ್‌ಗಳ ವ್ಯಾಪ್ತಿಯಲ್ಲಿ ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಮತ್ತು ಶಾಸಕ ಶಾಮನೂರು ಶಿವಶಂಕರಪ್ಪ ಇಂದು ಜಂಟಿ ರೋಡ್ ಷೋ ನಡೆಸುವರು.





ಮುಖಂಡರುಗಳಾದ ಜೆ.ಡಿ. ಪ್ರಕಾಶ್, ಬಿ.ಹೆಚ್. ವೀರಭದ್ರಪ್ಪ, ದೋಣಿ ನಿಂಗಪ್ಪ, ಎಲ್.ಎಂ.ಎಚ್. ಹನುಮಂತಪ್ಪ, ನೀಲಗಿರಿಯಪ್ಪ, ಕುಮಾರ್, ಶಿವಲಿಂಗಪ್ಪ, ಹೆಚ್.ಬಿ. ಗೋಣೆಪ್ಪ, ಸಾಲಮನಿ ಬಸವರಾಜ್, ಎಂ. ಮಂಜುನಾಥ, ಎಲ್.ಡಿ. ಗೋಣೆಪ್ಪ, ಸುರೇಶ, ಸುಧಾ ಇಟ್ಟಿಗುಡಿ ಮಂಜುನಾಥ, ವಾಸುದೇವ ಅಂಜಿನಪ್ಪ, ವಿಜಯ, ಅಣ್ಣೆಪ್ಪ ಮಂಜುಳಮ್ಮ, ಹೆಚ್. ಉದಯಕುಮಾರ್, ಸಾರಥಿ ಹನುಮಂತಪ್ಪ, ಡಿ. ರಿಯಾಜ್, ವೆಂಕಟ್ ಮತ್ತು ಮಹಿಳಾ ಯೂತ್ ಕಾಂಗ್ರೆಸ್ ಎಲ್ಲಾ ಮುಖಂಡರುಗಳು ಭಾಗವಹಿಸುವರು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಯ್ಯೂಬ್ ಪೈಲ್ವಾನ್ ತಿಳಿಸಿದ್ದಾರೆ.

# ಚುನಾವಣೆ ಹಿನ್ನೆಲೆಯಲ್ಲಿ ಕೇಜ್ರಿವಾಲ್ ಮಧ್ಯಂತರ ಜಾಮೀನು ಪರಿಶೀಲನೆ



ನವದೆಹಲಿ, ಮೇ 3 – ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರ ಮಧ್ಯಂತರ ಜಾಮೀನು ಅರ್ಜಿಯನ್ನು ಪರಿಶೀಲಿಸುವುದಾಗಿ ಸುಪ್ರೀಂ ಕೋರ್ಟ್ ಹೇಳಿದೆ. ಜಾರಿ ನಿರ್ದೇಶನಾಲಯದ ಅಕ್ರಮ ಹಣ ಪ್ರಕರಣದಲ್ಲಿ ಕೇಜ್ರಿವಾಲ್ ಬಂಧಿಸಲಾಗಿದೆ. ಜಾಮೀನು ಅರ್ಜಿಯ ವಿಚಾರಣೆಗೆ ಸಮಯ ಬೇಕಾಗಲಿದೆ. ಹೀಗಾಗಿ ಮಧ್ಯಂತರ ಜಾಮೀನಿಗೆ ಪರಿಶೀಲಿಸುವುದಾಗಿ ನ್ಯಾಯಮೂರ್ತಿಗಳಾದ ಸಂಜೀವ್ ಖನ್ನ ಹಾಗೂ ದೀಪಂಕರ್ ದತ್ತ ಅವರನ್ನು ಒಳಗೊಂಡ ಪೀಠ ಹೇಳಿದೆ. ಮೇ 7ರಂದು ಮಧ್ಯಂತರ ಜಾಮೀನಿನ ಕುರಿತು ವಿಚಾರಣೆ ನಡೆಸುವುದಾಗಿ ಸುಪ್ರೀಂ ಕೋರ್ಟ್ ಹೇಳಿದೆ.

# ಸರ್ಕಾರಿ ಕಾಲೇಜಿಗೆ ಪದವಿ ಪ್ರವೇಶಕ್ಕೆ ಅರ್ಜಿ

ದಾವಣಗೆರೆ, ಏ. 26 - ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 2024-25 ನೇ ಸಾಲಿಗೆ ಪ್ರಥಮ ವರ್ಷದ ಬಿಎ, ಬಿಕಾಂ, ಬಿಬಿಎ, ಬಿಎಸ್ಸಿ ಪದವಿಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದ್ವಿತೀಯ ಪಿಯುಸಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳು ಕಾಲೇಜಿಗೆ ಭೇಟಿ ನೀಡಿ ಅರ್ಜಿಗಳನ್ನು ಪಡೆದುಕೊಳ್ಳಬಹುದು.

# ನಗರದಲ್ಲಿ ಇಂದು ಚುನಾವಣಾ ರ್‍ಯಾಲಿ: ಕೆಎಸ್ಸಾರ್ಟಿಸಿ ಬಸ್ ನಿಲ್ದಾಣ ಹೊಸ ಕಟ್ಟಡಕ್ಕೆ ಸ್ಥಳಾಂತರ

ದಾವಣಗೆರೆ, ಮೇ 3 - ನಗರದ ಹೈಸ್ಕೂಲ್ ಮೈದಾನದಲ್ಲಿ ನಾಳೆ ದಿನಾಂಕ 4 ರಂದು ಏರ್ಪಾಡಾಗಿರುವ ಚುನಾವಣಾ ರ್‍ಯಾಲಿಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಪ್ರಿಯಾಂಕ ಗಾಂಧಿ ವಾದ್ರ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಗಮಿಸುತ್ತಿರುವ ಹಿನ್ನಲೆಯಲ್ಲಿ ಭದ್ರತಾ ದೃಷ್ಟಿಯಿಂದ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಹೈಸ್ಕೂಲ್ ಮೈದಾನದಲ್ಲಿದ್ದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣವನ್ನು ತಾತ್ಕಾಲಿಕವಾಗಿ ಒಂದು ದಿನ ಮಾತ್ರ ಹೊಸ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುತ್ತದೆ ಎಂದು ವಿಭಾಗೀಯ ನಿಯಂತ್ರಕರಾದ ಶ್ರೀನಿವಾಸ್‌ಮೂರ್ತಿ ಸಿ.ಇ.ತಿಳಿಸಿದ್ದಾರೆ.

# ಜಿ.ಎಂ.ಎಸ್ ಕಾಲೇಜಿನಿಂದ ನೆಟ್‌ಬಾಲ್ ಪಂದ್ಯಕ್ಕೆ ವಿದ್ಯಾರ್ಥಿನಿಯರ ಆಯ್ಕೆ



ದಾವಣಗೆರೆ, ಮೇ 3- ಜಿ.ಎಂ. ಎಸ್ ಅಕಾಡೆಮಿ ಪ್ರಥಮ ದರ್ಜೆ ಕಾಲೇಜಿನಿಂದ ಐವರು ವಿದ್ಯಾರ್ಥಿನಿಯರು ಇಂದಿನಿಂದ ಇದೇ ದಿನಾಂಕ 7ರವರೆಗೆ ಕೇರಳದ ಕ್ಯಾಲಿಕಟ್ ಯೂನಿವರ್ಸಿಟಿಯಲ್ಲಿ ನಡೆಯಲಿರುವ ಅಖಿಲ ಭಾರತ ಅಂತರ ವಿಶ್ವವಿದ್ಯಾನಿಲಯ ನೆಟ್‌ಬಾಲ್ (ಮಹಿಳೆ) ಪಂದ್ಯಾವಳಿಯಲ್ಲಿ ದ್ವಿತೀಯ ಬಿ.ಸಿ.ಎ. ವಿದ್ಯಾರ್ಥಿಗಳಾದ ಕು. ಕ್ಷೇಮ ಏಂಜಲ್, ಕು. ಭೂಮಿಕಾ ಕೆ.ಬಿ, ದ್ವಿತೀಯ ಬಿ.ಕಾಂ ವಿದ್ಯಾರ್ಥಿಗಳಾದ ಕು. ತೇಜಸ್ವಿನಿ ಎ, ಕು. ಧನುಶ್ರೀ, ಕು. ತನ್ವಿ ಎನ್. ಗುಪ್ತಾ ಅವರುಗಳು ದಾವಣಗೆರೆ ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಲಿದ್ದಾರೆ.


॥ ಶ್ರೀ ಗುರು ಹಾಲಸಿದ್ದೇಶ್ವರ ಸ್ವಾಮಿ ಪ್ರಸನ್ನ ॥

**ಕೈಲಾಸ ಶಿವಗಣಾರಾಧನೆ ಆಹ್ವಾನ**



ದಾವಣಗೆರೆ ಸಿಟಿ ನಿಜಲಿಂಗಪ್ಪ ಬಡಾವಣೆ ವಾಸಿಗಳಾದ **ಶ್ರೀ ವಾಣಿವಿಲಾಸ್ ದಿ॥ ಎಸ್.ಆರ್. ರಾಜಣ್ಣನವರ ಧರ್ಮಪತ್ನಿ ಶ್ರೀಮತಿ ಸರ್ವಮಂಗಳಮ್ಮ ಮತ್ತು ಮಕ್ಕಳು ಇವರು ಮಾಡುವ ವಿಜ್ಞಾಪನೆಗಳು.**

ದಿ. : 30.04.2024ನೇ ಮಂಗಳವಾರ ಸಂಜೆ 6 ಗಂಟೆಗೆ ನನ್ನ ಅಕ್ಕನವರಾದ

**ಶ್ರೀಮತಿ ವಾಣಿವಿಲಾಸ್ ಶಾರದಮ್ಮ**

(ದಿ॥ ಶ್ರೀ ವಾಣಿವಿಲಾಸ್ ಎಸ್.ಆರ್. ವೀರಣ್ಣನವರ ಧರ್ಮಪತ್ನಿ)


ಇವರು ಶಿವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ **ಕೈಲಾಸ ಶಿವಗಣಾರಾಧನೆಯನ್ನು** ದಿ. : 04.05.2024ನೇ ಶನಿವಾರ ಬೆಳಿಗ್ಗೆ 10.30 ಗಂಟೆಗೆ ಸುಕೃತೀಂದ್ರ ಕಲ್ಯಾಣ ಮಂಟಪ, 6ನೇ ಕ್ರಾಸ್, ಎಂ.ಸಿ.ಸಿ. 'ಎ' ಬ್ಲಾಕ್, ದಾವಣಗೆರೆ ಇಲ್ಲಿ ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

**ದುಃಖತಪ್ತರು : ವಾಣಿವಿಲಾಸ್ ಎಸ್.ವಿ. ಮಹಾನಂದಸ್ವಾಮಿ ಮತ್ತು ಸಹೋದರರು, ಸಹೋದರಿಯರು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಮತ್ತು ಮರಿಮೊಮ್ಮಕ್ಕಳು, ಕುಟುಂಬ ವರ್ಗದವರು, ವಾಣಿವಿಲಾಸ್ ವಂಶಸ್ಥರು ಹಾಗೂ ಬಂಧು-ಮಿತ್ರರು. ಮೊ : 9141139036, 7975537561, 96112 44989**

ವಿ.ಸೂ. : ಆಹ್ವಾನ ಪತ್ರಿಕೆ ತಲುಪದೇ ಇರುವವರು ಇದನ್ನೇ ಆಹ್ವಾನವೆಂದು ಭಾವಿಸಿ, ತಪ್ಪದೇ ಆಗಮಿಸಬೇಕಾಗಿ ವಿನಂತಿ.



**3ನೇ ವರ್ಷದ ಪುಣ್ಯಸ್ಮರಣೆ**



**ಲಿಂ॥ ಬೂಸ್ನೂರು ಉಮಾಮಹೇಶ್ವರಪ್ಪನವರು**

ನೀವು ನಮ್ಮನ್ನಗಲಿ ಇಂದಿಗೆ ಮೂರು ವರ್ಷಗಳು ಸಂದವು. ಸದಾ ನಿಮ್ಮ ಸ್ಮರಣೆಯಲ್ಲಿರುವ ನೀವು ಹಾಕಿ ಕೊಟ್ಟ ಮಾರ್ಗದರ್ಶನದಲ್ಲಿ ಮುನ್ನಡೆಯುತ್ತಿರುವ

ಪತ್ನಿ: ಶ್ರೀಮತಿ ಸುಲೋಚನ

ಮಕ್ಕಳಾದ : ಡಾ॥ ಬಿ.ಯು. ಯೋಗೇಂದ್ರ ಕುಮಾರ್ ಶ್ರೀಮತಿ ಸುಷ್ಮ

ಬಿ.ಯು. ಧೀರೇಂದ್ರ ಕುಮಾರ್ ಶ್ರೀಮತಿ ನಾಗವೇಣಿ

ಬಿ.ಯು. ವೀರೇಂದ್ರ ಕುಮಾರ್ ಶ್ರೀಮತಿ ಮಂಜುಳಾ

ಮೊಮ್ಮಕ್ಕಳಾದ: ನಿರೀಕ್ಷಾ, ಹಿಮಘ್ನ, ಶ್ರೇಷ್ಠ, ಅಥರ್ವ, ಶ್ರೀತನ್


## ಪಿ. ಮಂಜುಳ ನಿಧನ



ದಾವಣಗೆರೆ, ವಿದ್ಯಾನಗರ ಆಂಜನೇಯ ದೇವಸ್ಥಾನದ ಹಿಂಭಾಗ ನಿವಾಸಿ, ಗೋವಿಂದ್‌ಚಾರ್ ಅವರ ಧರ್ಮಪತ್ನಿ ಪಿ. ಮಂಜುಳ (58) ಇವರು ದಿನಾಂಕ : 3.5.2024ರ ಶುಕ್ರವಾರ ನಿಧನರಾದರು. ಪತಿ, ಇಬ್ಬರು ಹೆಣ್ಣು ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 04.05.2024 ರ ಶನಿವಾರ ಮಧ್ಯಾಹ್ನ 12.30ಕ್ಕೆ ದಾವಣಗೆರೆಯ ಪಿ.ಬಿ. ರಸ್ತೆಯ ವೈಕುಂಠಧಾಮದಲ್ಲಿ ನೆರವೇರಿಸಲಾಗುವುದು.

# ಹೊನ್ನಾಳಿ ತಾಲ್ಲೂಕು ಅರಕೆರೆ ಬಳಿಯ ರಸ್ತೆ ಅಪಘಾತದಲ್ಲಿ ಇಬ್ಬರ ಸಾವು

ಹೊನ್ನಾಳಿ, ಮೇ 3- ದಾವಣಗೆರೆಯಲ್ಲಿ ಸಮಾರಂಭ ಮುಗಿಸಿಕೊಂಡು ಶಿವಮೊಗ್ಗಕ್ಕೆ ಎಸ್‌ಯುವಿ ಕಾರಿನಲ್ಲಿ ತೆರಳುತ್ತಿದ್ದ ಸಂದರ್ಭದಲ್ಲಿ ಅರಕೆರೆ ಬಳಿಯ ಮರಕ್ಕೆ ಕಾರು ಡಿಕ್ಕಿಯಾಗಿ ಇಬ್ಬರು ಮೃತಪಟ್ಟಿದ್ದಾರೆ.

ಹೊನ್ನಾಳಿ ತಾಲ್ಲೂಕಿನ ಮೂಲದವರೆನ್ನಲಾದ ಮೃತರು ಹಾಗೂ ಸಂಬಂಧಿಗಳು ಶಿವಮೊಗ್ಗದಲ್ಲಿ ವಾಸವಾಗಿದ್ದರೆಂದು ತಿಳಿದು ಬಂದಿದೆ.

ವೇದಮೂರ್ತಿ (55), ಅವರ ತಾಯಿ ಶಾರದಮ್ಮ (80) ಮೃತಪಟ್ಟಿದ್ದು, ಓಬ್ಬರ ಸ್ಥಿತಿ ಚಿಂತಾಜನಕವಾಗಿದೆ. ಉಳಿದ ನಾಲ್ವರಿಗೆ ಗಾಯಗಳಾಗಿದ್ದು, ಹೊನ್ನಾಳಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಪಡೆದು, ನಂತರ ಶಿವಮೊಗ್ಗ ಮ್ಯಾಕ್ಸ್ ಆಸ್ಪತ್ರೆಗೆ ತೆರಳಿರುವುದಾಗಿ ತಿಳಿದುಬಂದಿದೆ. ಹೊನ್ನಾಳಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# ಇರಾನ್‌ನಿಂದ ಭಾರತೀಯ ಹಡಗು ಸಿಬ್ಬಂದಿ ಬಿಡುಗಡೆ

ನವದೆಹಲಿ, ಮೇ 3 – ತನ್ನ ವಶದಲ್ಲಿರುವ ಪೋರ್ಚುಗೀಸ್ ಧ್ವಜದ ಸರಕು ಹಡಗು ಎಂ.ಎಸ್.ಸಿ. ಏರೀಸ್‌ನಲ್ಲಿದ್ದ ಎಲ್ಲಾ ಸಿಬ್ಬಂದಿಯನ್ನು ಬಿಡುಗಡೆ ಮಾಡಿರುವುದಾಗಿ ಇರಾನ್ ತಿಳಿಸಿದೆ.

ಈ ಹಡಗಿನಲ್ಲಿ 25 ಸಿಬ್ಬಂದಿ ಇದ್ದು, ಇವರಲ್ಲಿ 17 ಜನ ಭಾರತೀಯರು.

17 ಸಿಬ್ಬಂದಿಯ ಪೈಕಿ ಏಕೈಕ ಮಹಿಳೆಯಾಗಿದ್ದ ಆನ್ ಟೆಸ್ಸಾ ಜೋಸೆಫ್ ಅವರನ್ನು ಈ ಹಿಂದೆಯೇ ಬಿಡುಗಡೆ ಮಾಲಾಗಿತ್ತು.

ಇರಾನ್ ಸೈನ್ಯ ಈ ಹಡಗನ್ನು ಏಪ್ರಿಲ್ 13ರಂದು ವಶಕ್ಕೆ ತೆಗೆದುಕೊಂಡಿತ್ತು.

# ಕಾಂಗ್ರೆಸ್ ಈ ಬಾರಿ 50 ದಾಟುವುದಿಲ್ಲ : ಮೋದಿ



ಬರ್ಧಮಾನ್, ಮೇ 3 – ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ದಾಖಲೆಯ ಕಡಿಮೆ ಸ್ಥಾನ ಪಡೆಯಲಿದೆ. 50 ಸ್ಥಾನ ಪಡೆಯಲೂ ಪರದಾಡಲಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಭವಿಷ್ಯ ನುಡಿದಿದ್ದಾರೆ.

ಉತ್ತರ ಪ್ರದೇಶದ ರಾಯ್ ಬರೇಲಿಯಿಂದ ಸ್ಪರ್ಧಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನಾಮಪತ್ರ ಸಲ್ಲಿಸಿರುವುದಕ್ಕೆ ಲೇವಡಿ ಮಾಡಿರುವ ಮೋದಿ, ಕೇರಳದ ವಯನಾಡಿನಲ್ಲಿ ಸೋಲುವುದು ಗೊತ್ತಾಗಿರುವುದರಿಂದ ಮತ್ತೊಂದು ಕಡೆ ಸ್ಪರ್ಧಿಸುತ್ತಿದ್ದಾರೆ ಎಂದಿದ್ದಾರೆ. ಪ್ರಸಕ್ತ ರಾಹುಲ್ ಗಾಂಧಿ ವಯನಾಡ್ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಪಶ್ಚಿಮ ಬಂಗಾಳದ ಬರ್ಧಮಾನ್‌ನಲ್ಲಿ ನಡೆದ ಚುನಾವಣಾ ಸಮಾವೇಶದಲ್ಲಿ ಮಾತನಾಡಿದ ಅವರು, ಚುನಾವಣಾ ಫಲಿತಾಂಶದ ಬಗ್ಗೆ ಯಾವುದೇ ಅಭಿಪ್ರಾಯ ಸಂಗ್ರಹ ಇಲ್ಲವೇ ಮತಗಟ್ಟೆ ಸಮೀಕ್ಷೆಯ ಅಗತ್ಯವಿಲ್ಲ. ಕಾಂಗ್ರೆಸ್ ಸೋಲಿನ ಬಗ್ಗೆ ಬಹಳ ಹಿಂದೆಯೇ ಮಾತನಾಡಿದ್ದೇನೆ. ಕಾಂಗ್ರೆಸ್‌ನ ಹಿರಿಯ ನಾಯಕರು ಲೋಕಸಭೆ ಬಿಟ್ಟು ರಾಜಸ್ಥಾನದಿಂದ ರಾಜ್ಯಸಭೆಗೆ ತೆರಳಿದ್ದಾರೆ. ಅವರಿಗೆ ಸೋಲಿನ ಸುಳಿವು ದೊರೆತಿದೆ ಎಂದರು. ಪರೋಕ್ಷವಾಗಿ ಅವರು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರನ್ನು ಟೀಕಿಸಿದರು. ಕಾಂಗ್ರೆಸ್‌ನ 'ಶೆಹಜಾದಾ' (ರಾಹುಲ್ ಗಾಂಧಿ) ಅಮೇಥಿಯಲ್ಲಿ ಸೋತು ವಯನಾಡ್‌ಗೆ ತೆರಳಿದ್ದರು. ಈಗ ವಯನಾಡಿನ ಜೊತೆಗೆ ರಾಯ್ ಬರೇಲಿಯಿಂದಲೂ ಸ್ಪರ್ಧಿಸಿದ್ದಾರೆ. ವಯನಾಡ್‌ನಲ್ಲಿ ಸೋಲುವುದು ಅವರಿಗೆ ಗೊತ್ತಾಗಿದೆ ಎಂದು ಮೋದಿ ಹೇಳಿದರು.

ಜನರು ಹೆದರಬಾರದು ಎಂದು ಅವರು ಹೇಳುತ್ತಿರುತ್ತಾರೆ. ನಾನೂ ಅವರಿಗೆ ಹೇಳುತ್ತೇನೆ, 'ಹೆದರಬೇಡಿ, ಓಡಬೇಡಿ' ಎಂದು ಮೋದಿ ಲೇವಡಿ ಮಾಡಿದರು.

ಕಾಂಗ್ರೆಸ್ ಎಷ್ಟೇ ಪ್ರಯತ್ನ ಪಟ್ಟರೂ ಈ ಬಾರಿ ಅರ್ಧ ಶತಕದ ಗಡಿ ದಾಟುವುದಿಲ್ಲ. ಅವರು 50 ಸೀಟು ಗಳಿಸಲೂ ಪರದಾಡಲಿದ್ದಾರೆ ಎಂದು ಮೋದಿ ಹೇಳಿದರು. 2014ರಲ್ಲಿ ಕಾಂಗ್ರೆಸ್ 44 ಹಾಗೂ 2019ರಲ್ಲಿ 52 ಸ್ಥಾನಗಳನ್ನು ಪಡೆದಿತ್ತು.

# ಲೋಕಸಭಾ ಚುನಾವಣೆ : ನಗರದಲ್ಲಿ ಪೊಲೀಸ್ ಪಥ ಸಂಚಲನ



ದಾವಣಗೆರೆ, ಮೇ 3- ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದಲ್ಲಿ ನಿನ್ನೆ ಪೊಲೀಸ್ ಪಥ ಸಂಚಲನ ನಡೆಸಲಾಯಿತು.

ಪಥ ಸಂಚಲನವು ಹಗೇದಿಬ್ಬ ವೃತ್ತದಿಂದ ಆರಂಭವಾಗಿ ಗಾಂಧಿನಗರ, ಶಿವಾಜಿ ವೃತ್ತ, ಹೊಂಡದ ವೃತ್ತ, ಅರುಣ ವೃತ್ತ, ರಾಮ್ ಅಂಡ್ ಕೋ ವೃತ್ತ, ಚಿಗಟೇರಿ ಆಸ್ಪತ್ರೆ ರಸ್ತೆ ಮೂಲಕ ಸಾಗಿ ಗುಂಡಿ ವೃತ್ತದಲ್ಲಿ ಮುಕ್ತಾಯವಾಯಿತು. ಸಿಇಓ ಸುರೇಶ್ ಇಟ್ನಾಳ್ ಚಾಲನೆ ನೀಡಿದರು. ಪೊಲೀಸ್ ಅಧೀಕ್ಷಕರಾದ ಶ್ರೀಮತಿ ಉಮಾ ಪ್ರಶಾಂತ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯಕುಮಾರ ಎಂ ಸಂತೋಷ್, ಜಿ. ಮಂಜುನಾಥ, ಡಿವೈಎಸ್ಪಿ ಮಲ್ಲೇಶ್ ದೊಡ್ಮನಿ, ನಿಶಿಮಪ್ಪ ಹಾಗೂ ಪೊಲೀಸ್ ಅಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿಗಳು, ಆರ್‌ಪಿಎಫ್ ಅಧಿಕಾರಿ, ಪೊಲೀಸ್ ಸಿಬ್ಬಂದಿಗಳೊಂದಿಗೆ ಪಥ ಸಂಚಲನವನ್ನು ನಡೆಸುವ ಮೂಲಕ ಶಾಂತಿಯುತವಾಗಿ ಹಾಗೂ ಭಯ ಮುಕ್ತವಾಗಿ ಮತದಾನ ನಡೆಸುವಂತೆ ಜಾಗೃತಿ ಮೂಡಿಸಲಾಯಿತು.

# ಜನರ ಪರ ಇರುವ ಕಾಂಗ್ರೆಸ್‌ಗೆ ಮತ ನೀಡಿ

## ರಾಣೇಬೆನ್ನೂರಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಯಾಚನೆ

ರಾಣೇಬೆನ್ನೂರು, ಮೇ 3- ದಲಿತರ, ಅಲ್ಪಸಂಖ್ಯಾತರ, ಬಡವರ, ಹಿಂದುಳಿದವರ, ಮಹಿಳೆಯರ ಕಲ್ಯಾಣ ಕಾರ್ಯಕ್ರಮಗಳ, ಅವರಿಗೆ ದೊರಕುವ ಮೀಸಲಾತಿಯ ಸೌಲಭ್ಯಗಳನ್ನು ವಿರೋಧಿಸುವ ಆರ್‌ಎಸ್‌ಎಸ್ ಹಾಗೂ ಬಿಜೆಪಿಗೆ ಮತ ನೀಡಬೇಡಿ. ಆ ಎಲ್ಲಾ ಜನರ ಪರ ಇರುವ ಕಾಂಗ್ರೆಸ್‌ಗೆ ಮತ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಳಿಕೊಂಡರು.

ಇಲ್ಲಿನ ಉರ್ದು ಹೈಸ್ಕೂಲ್ ಮೈದಾನದಲ್ಲಿ ಇಂದು ಏರ್ಪಾಡಾಗಿದ್ದ ಪ್ರಜಾಧ್ವನಿ 2 ಯಾತ್ರೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದ ಗಡ್ಡದೇವರಮಠ ಅವರಿಗೆ ಮತ ಯಾಚಿಸಿ ಅವರು ಮಾತನಾಡಿದರು.

ಈ ಎಲ್ಲಾ ತುಳಿಯಲ್ಪಟ್ಟ ಜನರ ಕಲ್ಯಾಣದ ಮಂಡಲ ವರದಿಯ ಜಾರಿಯನ್ನು ವಿರೋಧಿಸಿ, ಅಂದಿನ ಶಾಲಾ - ಕಾಲೇಜು ವಿದ್ಯಾರ್ಥಿಗಳನ್ನು ಎತ್ತಿಕಟ್ಟಿ ಮೀಸಲಾತಿಯ ವಿರುದ್ಧ ಹೋರಾಟ ಮಾಡಿದ ಆರ್‌ಎಸ್‌ಎಸ್ ಮತ್ತು ಬಿಜೆಪಿಯ ನರೇಂದ್ರ ಮೋದಿ ಹಾಗೂ ಅಮಿತ್ ಷಾ, ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅಂತವರಿಗೆ ಈ ಜನರ ಮತ ಕೇಳುವ ನೈತಿಕತೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ತರಾಟೆ ತೆಗೆದುಕೊಂಡರು.

ಕಾಂಗ್ರೆಸ್ ಪಕ್ಷ ನೀಡಿದ ಗ್ಯಾರಂಟಿಗಳನ್ನು ಅಧಿಕಾರಕ್ಕೆ ಬಂದ ಕೆಲವೇ ತಿಂಗಳುಗಳಲ್ಲಿ ಜಾರಿ ಮಾಡಿ ನುಡಿದಂತೆ ನಡೆದಿದ್ದೇವೆ. ಹತ್ತು ವರ್ಷ ಆಡಳಿತ ನಡೆಸಿದ ಮೋದಿ ತಾವು ಹೇಳಿದ ಯಾವ ಮಾತುಗಳಿಗೆ ಬದ್ಧತೆ ಇಟ್ಟುಕೊಂಡು ನಡೆದಿದ್ದಾರೆ? ಎಂದು ಪ್ರಶ್ನಿಸಿದ್ದ ಸಿದ್ದರಾಮಯ್ಯ, ಮೋದಿ ಹಾಗೂ ಬಿಜೆಪಿ ಕೇವಲ ಸುಳ್ಳು ಹೇಳುತ್ತಾ ದೇಶದ ಜನರಿಗೆ



ಮೋಸ ಮಾಡುತ್ತಲೇ ಬಂದಿದ್ದಾರೆ. ಅಂತವರಿಗೆ ಮತ ನೀಡಿ ನಿಮ್ಮ ನಿಮ್ಮ ಮಕ್ಕಳ ಭವಿಷ್ಯ ಹಾಳು ಮಾಡಿಕೊಳ್ಳಬೇಡಿ ಎಂದು ಸಿದ್ದರಾಮಯ್ಯ ಹೇಳಿದರು.

**ಕುರುಬರ ಮತ ಬಿಜೆಪಿಗಿಲ್ಲ...**

ರಾಜ್ಯದಲ್ಲಿ ಶೇ.7 ರಷ್ಟಿರುವ ಕುರುಬರಿಗೆ ಈ ಚುನಾವಣೆಯಲ್ಲಿ ಒಬ್ಬರಿಗೂ ಬಿಜೆಪಿ ಟಿಕೆಟ್ ನೀಡಲಿಲ್ಲ, ಆರ್‌ಎಸ್‌ಎಸ್ ನಿಂದ ಬಂದು ಪಕ್ಷದ ಬಲವರ್ಧನೆಗೆ ದುಡಿದ ಈಶ್ವರಪ್ಪ ಮಗನಿಗೆ ಟಿಕೆಟ್ ಕೊಡದೇ ಜನತಾದಳದಿಂದ ಬಂದ ಬಸವರಾಜ ಬೊಮ್ಮಾಯಿಗೆ ಟಿಕೆಟ್ ನೀಡಿದ್ದಾರೆ. ರಾಜ್ಯದ ಎಲ್ಲಾ ಕುರುಬರು ಒಂದೇ ಒಂದು ಮತವನ್ನು ಬಿಜೆಪಿಗೆ ಕೊಡಬಾರದು ನಾನು ಕುರುಬನಾಗಿ ಈ ಮಾತು ಹೇಳುತ್ತಿಲ್ಲ. ಸಮಸಮಾಜ ನಿರ್ಮಿಸುವ ಆಕಾಂಕ್ಷೆ ಉಳ್ಳವನಾಗಿ ಈ ಮಾತು ಹೇಳುತ್ತಿದ್ದೇನೆ ಎಂದು ಸಿದ್ದರಾಮಯ್ಯ ಹೇಳಿದರು.

ಕೇವಲ ಸುಳ್ಳುಗಳನ್ನೇ ಹೇಳುತ್ತಾ ದೇಶದ ಜನರಿಗೆ ಯಾಮಾರಿಸುತ್ತಿರುವ ಬಿಜೆಪಿಗೆ ಮತ ನೀಡದೇ ನುಡಿದಂತೆ ನಡೆಯುವ ಜನಪರ ಕಾರ್ಯಕ್ರಮಗಳಿಗೆ ಆದ್ಯತೆ ನೀಡುವ ಕಾಂಗ್ರೆಸ್ ಪಕ್ಷಕ್ಕೆ ಮತ ಕೊಡಿರಿ ಎಂದು ಹೇಳಿದ ಹಿರಿಯ ಮುಖಂಡ, ವಿಧಾನಸಭೆ ಮಾಜಿ ಅಧ್ಯಕ್ಷ ಕೆ.ಬಿ. ಕೋಳಿವಾಡ ಮಾತನಾಡಿದರು.

50 ವರ್ಷ ನನಗೆ ಆಶೀರ್ವಾದ ಮಾಡಿ, ಈಗ ಮಗನಿಗೂ ಆಶೀರ್ವದಿಸಿದ್ದೀರಿ. ಈ ಚುನಾವಣೆಯಲ್ಲೂ ಸಹ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನ್ನ ಆತ್ಮಕ್ಕೆ ನೆಮ್ಮದಿ ತನ್ನಿರಿ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಅಧ್ಯಕ್ಷ ಮಂಜನಗೌಡ ಪಾಟೀಲ ಸ್ವಾಗತಿಸಿದರು. ಶಾಸಕ ಪ್ರಕಾಶ ಕೋಳಿವಾಡ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಅಭ್ಯರ್ಥಿ ಆನಂದ ಗಡ್ಡದೇವರಮಠ, ಸಚಿವ ಹೆಚ್.ಕೆ. ಪಾಟೀಲ, ಗದಗ ಹಾಗೂ ಹಾವೇರಿ ಜಿಲ್ಲೆಯ ಕಾಂಗ್ರೆಸ್ ಶಾಸಕರು, ಮಾಜಿ ಶಾಸಕರು, ಪಕ್ಷದ ಪದಾಧಿಕಾರಿಗಳು ಸಮಾರಂಭದ ವೇದಿಕೆಯಲ್ಲಿದ್ದರು.

### ಕುಂಟೆತ್ತು...

ಕಾಂಗ್ರೆಸ್ ಅಭ್ಯರ್ಥಿ ಆನಂದ ಗಡ್ಡದೇವರಮಠ ಆರು ಹಲ್ಲಿನ ಹೋರಿ, ದೆಹಲಿ ಬರುವವರೆಗೂ ದಣಿವರಿಯದೇ ಸಾಗಲಿದೆ. ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಕುಂಟೆತ್ತು. ಅದು ದೆಹಲಿ ತಲುಪುವುದು ಅಸಾಧ್ಯ. ಕಾರಣ ಅದನ್ನು ಇಲ್ಲಿಯೇ ಶಿಂಗ್ಲಾವಿನಲ್ಲಿಯೇ ಇಡಿ ಎಂದು ಪ್ರಾಸ್ತಾವಿಕ ಮಾತುಗಳನ್ನಾಡಿದ ಶಾಸಕ ಪ್ರಕಾಶ್ ಕೋಳಿವಾಡ ಹೇಳಿದರು.

# ಮೂರು ದಶಕಗಳಾದರೂ ಸುಸಜ್ಜಿತ ಆಸ್ಪತ್ರೆ, ಹೈಟೆಕ್ ಶಾಲೆ, ಕೈಗಾರಿಕೆಗಳು ಯಾಕೆ ಬಂದಿಲ್ಲ



### ಹೊನ್ನಾಳಿ - ನ್ಯಾಮತಿ ತಾಲ್ಲೂಕಿನ ಪ್ರಚಾರದಲ್ಲಿ ಪಕ್ಷೇತರ ಅಭ್ಯರ್ಥಿ ಜಿ.ಬಿ. ವಿನಯ್ ಕುಮಾರ್ ಪ್ರಶ್ನೆ

ಹೊನ್ನಾಳಿ, ಮೇ 3 - ಜಿಲ್ಲೆಯಲ್ಲಿ ಮೂರು ದಶಕಗಳಾದರೂ ಸುಸಜ್ಜಿತ ಆಸ್ಪತ್ರೆ, ಸರ್ಕಾರಿ ಮೆಡಿಕಲ್ ಕಾಲೇಜು, ಹೈಟೆಕ್ ಶಾಲೆಗಳು, ದೊಡ್ಡ ಕೈಗಾರಿಕೆಗಳು ಯಾಕೆ ಬಂದಿಲ್ಲ ? ಎಂದು ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಜಿ. ಬಿ. ವಿನಯ್ ಕುಮಾರ್ ಪ್ರಶ್ನಿಸಿದರು. ಹೊನ್ನಾಳಿ-ನ್ಯಾಮತಿ ತಾಲ್ಲೂಕಿನ ಸಾಗರಪೇಟೆಯಲ್ಲಿ ಬಹಿರಂಗ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರು 35 ವರ್ಷಗಳಿಂದ ಶಾಸಕರಾಗಿದ್ದಾರೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸುಸಜ್ಜಿತ ಆಸ್ಪತ್ರೆ ನಿರ್ಮಾಣ ಮಾಡಿಲ್ಲ. ಹೈಟೆಕ್ ಶಾಲೆಗಳೂ ಆಗಿಲ್ಲ. ದೊಡ್ಡ ಕೈಗಾರಿಕೆಗಳನ್ನು ತರಲು ಸಾಧ್ಯವಾಗಿಲ್ಲ. ಅದೇ ರೀತಿ ಜಿ.ಎಂ. ಸಿದ್ದೇಶ್ವರ ಅವರು ನಾಲ್ಕು ಬಾರಿ ಸಂಸದರಾಗಿ ಆಯ್ಕೆಯಾಗಿ ಹೋಗಿದ್ದರೂ ಪ್ರಯೋಜನ ಮಾತ್ರ ಶೂನ್ಯ ಎಂದು ಅವರು ಕಿಡಿ ಕಾರಿದರು.

ಹೊನ್ನಾಳಿ - ನ್ಯಾಮತಿ ಅವಳಿ ತಾಲ್ಲೂಕಿನಲ್ಲಿ ಮೆಕ್ಕೆಜೋಳ, ಈರುಳ್ಳಿ, ಕೆಲವು ಕಡೆಗಳಲ್ಲಿ ಅಡಿಕೆ ಬೆಳೆಯಲಾಗುತ್ತದೆ. ತುಂಗಭದ್ರಾ ನದಿ ಹರಿಯುತ್ತದೆ. ಆದರೂ ಈ ತಾಲ್ಲೂಕಿನ ಹಲವು ಹಳ್ಳಿಗಳಲ್ಲಿ ಸಮಸ್ಯೆಗಳು ಹಾಗೆಯೇ ಇವೆ. ನೀರಿಲ್ಲದೇ ರೈತರು ಪರದಾಡುತ್ತಿದ್ದಾರೆ. ಮಳೆ ಹೆಚ್ಚು ಬಂದರೆ ಪ್ರವಾಹ ತಲೆದೋರುತ್ತದೆ. ಮನೆಗಳಿಗೆ ನೀರು ನುಗ್ಗುತ್ತದೆ, ಜಮೀನುಗಳು ಜಲಾವೃತಗೊಳ್ಳುತ್ತವೆ. ಎಷ್ಟೋ ಹಳ್ಳಿಗಳಲ್ಲಿ ಸೇತುವೆಗಳು ನಿರ್ಮಾಣ ಆಗಿಲ್ಲ. ಚುನಾವಣೆ ಬಂದಾಗ ನಿಮ್ಮ ಬಳಿ ಎಲ್ಲರೂ ಬರುತ್ತಾರೆ. ಭರವಸೆ ಕೊಡುತ್ತಾರೆ. ಮತ್ತೆ ಬರುವುದು ಮುಂದಿನ ಚುನಾವಣೆಗೆ. ಹಾಗಾಗಿ, ಇಂತಹವರನ್ನು ತಿರಸ್ಕರಿಸಿ, ನನ್ನನ್ನು ಆರಿಸಿ ಕಳುಹಿಸಿ ಎಂದು ಮನವಿ ಮಾಡಿದರು.

ತುಂಗಭದ್ರಾ ನದಿ ಉಕ್ಕಿ ಹರಿದರೆ ಎಷ್ಟೋ ಕಡೆಗಳಲ್ಲಿ ಸೇತುವೆಗಳು ಕುಸಿಯುತ್ತವೆ. ಜನರು ಓಡಾಡಲು ಕಷ್ಟವಾಗುತ್ತದೆ. ರೈತರು, ಜನರು ಎದುರಿಸುವ ಕಷ್ಟಗಳು ಅಷ್ಟಿಷ್ಟಲ್ಲ. ಮಕ್ಕಳು ಶಾಲಾ-ಕಾಲೇಜುಗಳಿಗೆ ಹೋಗಲು ಆಗುವುದಿಲ್ಲ.

ಸಮಸ್ಯೆಗಳ ಸುಳಿಯಲ್ಲಿ ಬದುಕುವುದಕ್ಕಿಂತ ಸ್ವಾಭಿಮಾನಿಗಳಾಗೋಣ. ಅಭಿವೃದ್ಧಿಗೆ ಕೈಜೋಡಿಸೋಣ. ಅಧಿಕಾರಕ್ಕಾಗಿ ಚುನಾವಣೆಗೆ ನಿಲ್ಲುವವರಿಗೆ ತಕ್ಕ ಪಾಠ ಕಲಿಸೋಣ ಎಂಬ ಶಪಥ ಮಾಡಿ. ನಿಮ್ಮ ಮನೆ ಬಾಗಿಲಿಗೆ ಅಭಿವೃದ್ಧಿ ಹುಡುಕಿಕೊಂಡು ಬರುವಂತೆ ಮಾಡಿ ತೋರಿಸುತ್ತೇನೆ ಎಂದು ಭರವಸೆ ನೀಡಿದರು.

# ರಾಯ್‌ಬರೇಲಿಯಿಂದ ನಾಮಪತ್ರ ಸಲ್ಲಿಸಿದ ರಾಹುಲ್ ಗಾಂಧಿ



**ಕೊನೆ ಕ್ಷಣದಲ್ಲಿ ಕುಟುಂಬದ ಕ್ಷೇತ್ರದಿಂದ ಕಣಕ್ಕೆ**

ನವದೆಹಲಿ, ಮೇ 3 – ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಉತ್ತರ ಪ್ರದೇಶದ ರಾಯ್ ಬರೇಲಿಯಿಂದ ನಾಮಪತ್ರ ದಾಖಲಿಸಿದ್ದಾರೆ. ನಾಮಪತ್ರ ಸಲ್ಲಿಸಲು ಒಂದು ಗಂಟೆಯಷ್ಟೇ ಬಾಕಿ ಇರುವಾಗ ಗಾಂಧಿ ಈ ಕ್ಷೇತ್ರದ ಸ್ಪರ್ಧಾ ಕಣಕ್ಕೆ ಧುಮುಕಿದ್ದಾರೆ.

ರಾಹುಲ್ ಗಾಂಧಿ ಅವರ ತಾಯಿ ಸೋನಿಯಾ ಗಾಂಧಿ ಕಳೆದ ಎರಡು ದಶಕಗಳಿಂದ ರಾಯ್ ಬರೇಲಿ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದರು. ಈ ಬಾರಿ ಅವರು ರಾಜ್ಯಸಭೆಗೆ ತೆರಳಿದ್ದಾರೆ. ರಾಹುಲ್ ಗಾಂಧಿ ಅಜ್ಜಿ ಇಂದಿರಾ ಗಾಂಧಿ ಹಾಗೂ ತಾತ ಫಿರೋಜ್ ಗಾಂಧಿ ಅವರೂ ಈ ಕ್ಷೇತ್ರವನ್ನು ಪ್ರತಿನಿಧಿಸಿದ್ದರು.

2019ರ ಚುನಾವಣೆಯಲ್ಲಿ ರಾಹುಲ್ ಗಾಂಧಿ ಅವರು ಬಿಜೆಪಿಯ ಸ್ಮೃತಿ ಇರಾನಿ ವಿರುದ್ಧ ಅಮೇಥಿ ಕ್ಷೇತ್ರದಲ್ಲಿ ಪರಾಭವಗೊಂಡಿದ್ದರು. ಆದರೆ, ಕೇರಳದ ವಯನಾಡ್‌ನಲ್ಲಿ ಗೆಲುವು ಸಾಧಿಸಿದ್ದರು. ಈ ಬಾರಿಯೂ ಅವರು ವಯನಾಡ್‌ನಲ್ಲೂ ಸ್ಪರ್ಧಿಸಿದ್ದಾರೆ. ಈ ಕ್ಷೇತ್ರಕ್ಕೆ ಮತದಾನ ಈಗಾಗಲೇ ಪೂರ್ಣಗೊಂಡಿದೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ನಾಯಕರಾದ ಸೋನಿಯಾ ಗಾಂಧಿ ಹಾಗೂ ಪ್ರಿಯಾಂಕ ಗಾಂಧಿ ವಾದ್ರಾ ಅವರೊಂದಿಗೆ ಮಧ್ಯಾಹ್ನ 2 ಗಂಟೆಗೆ ರಾಹುಲ್ ಗಾಂಧಿ ನಾಮಪತ್ರ ಸಲ್ಲಿಸಿದ್ದಾರೆ. ಶುಕ್ರವಾರ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸಲ್ಲಿಕೆಗೆ ಗಡುವಿತ್ತು.

ಪ್ರಿಯಾಂಕ ಪತಿ ರಾಬರ್ಟ್ ವಾದ್ರಾ ಹಾಗೂ ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಸಹ ಜೊತೆಗಿದ್ದರು.

ಅಮೇಥಿ ಲೋಕಸಭಾ ಕ್ಷೇತ್ರದಿಂದ ಗಾಂಧಿ ಕುಟುಂಬದ ನಿಕಟವರ್ತಿಯಾದ ಕಿಶೋರಿ ಲಾಲ್ ಶರ್ಮ ಅವರು ನಾಮಪತ್ರ ದಾಖಲಿಸಿದ್ದಾರೆ. ಎರಡೂ ಕ್ಷೇತ್ರಗಳಿಗೆ ಮೇ 20ರಂದು ಚುನಾವಣೆ ನಡೆಯಲಿದೆ.

ಕಾಂಗ್ರೆಸ್ ಹಾಗೂ ಸಮಾಜವಾದಿ ಪಕ್ಷದ ಕಾರ್ಯಕರ್ತರು ನಾಮಪತ್ರ ಸಲ್ಲಿಕೆಯ ವೇಳೆ ದೊಡ್ಡ ಸಂಖ್ಯೆಯಲ್ಲಿ ನೆರೆದಿದ್ದರು. ನಾಮಪತ್ರ ಸಲ್ಲಿಕೆಯ ನಂತರ ರಾಹುಲ್ ಗಾಂಧಿ ಹಾಗೂ ಕುಟುಂಬದ ಇತರೆ ಸದಸ್ಯರು ಜಿಲ್ಲಾ ಕಾಂಗ್ರೆಸ್ ಕಚೇರಿಗೆ ತೆರಳಿದರು. ಅಲ್ಲಿ ಪೂಜೆ ಸಲ್ಲಿಸಲಾಯಿತು.

ರಾಯ್ ಬರೇಲಿ ಕ್ಷೇತ್ರಕ್ಕೆ ಗಾಂಧಿ ಕುಟುಂಬದವರನ್ನೇ ಕಣಕ್ಕಿಳಿಸಬೇಕು ಎಂದು ಪಕ್ಷ ಹಾಗೂ ಸ್ಥಳೀಯರು ಬೇಡಿಕೆ ಮುಂದಿಟ್ಟಿದ್ದರು. ಹೀಗಾಗಿ ರಾಹುಲ್ ಗಾಂಧಿ ಸ್ಪರ್ಧಿಸುತ್ತಿದ್ದಾರೆ ಎಂದು ಕಾಂಗ್ರೆಸ್ ವಕ್ತಾರ ವಿನಯ್ ದ್ವಿವೇದಿ ಹೇಳಿದ್ದಾರೆ. ಇದಕ್ಕೂ ಮುಂಚೆ ಬಿಜೆಪಿಯ ದಿನೇಶ್ ಪ್ರತಾಪ್ ಸಿಂಗ್ ಅವರು ರಾಯ್ ಬರೇಲಿ ಕ್ಷೇತ್ರದಲ್ಲಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ. 2019ರಲ್ಲಿ ಅವರು ಸೋನಿಯಾ ಗಾಂಧಿ ವಿರುದ್ಧ ಪರಾಭವಗೊಂಡಿದ್ದರು.

# ಸಿಇಟಿ ಮರು ಪರೀಕ್ಷೆ ಬೇಡ : ಎಐಡಿಎಸ್‌ಓ

ದಾವಣಗೆರೆ, ಮೇ 3- ಎಪ್ರಿಲ್ 18 ಮತ್ತು 19 ರಂದು ನಡೆದ ಕೆ-ಸಿಇಟಿ ಪರೀಕ್ಷೆಯಲ್ಲಿ ಪಠ್ಯಕ್ರಮದಿಂದ ಹೊರತಾದ ಹಲವು ಪ್ರಶ್ನೆಗಳು ಮುದ್ರಣ ಗೊಂಡ ಹಿನ್ನೆಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯು ಬಿಕ್ಕಟ್ಟನ್ನು ಪರಿಹರಿಸಲು ಮತ್ತು ಪರಿಹಾರವನ್ನು ಕಂಡುಹಿಡಿಯಲು ಸಮಿತಿಯನ್ನು ರಚಿಸಿದೆ. ಆದರೆ ಸಿಇಟಿ ಮರು ಪರೀಕ್ಷೆ ಬೇಡ ಎಂಬುದೇ ರಾಜ್ಯದ ವಿದ್ಯಾರ್ಥಿಗಳ ಆಗ್ರಹ ವಾಗಿದೆ ಎಂದು ಎಐಡಿಎಸ್‌ಓ ರಾಜ್ಯ ಕಾರ್ಯದರ್ಶಿ ಅಜಯ್ ಕಾಮತ್ ಹೇಳಿದ್ದಾರೆ.

ನೀಟ್ ಮತ್ತು ಇತರ ಹಲವಾರು ಪ್ರಮುಖ ಪ್ರವೇಶ ಪರೀಕ್ಷೆಗಳು ವಿದ್ಯಾರ್ಥಿಗಳ ಮುಂದೆ ಸನ್ನಿಹಿತವಾಗಿರುವುದರಿಂದ ಮತ್ತು ಇಂದಿನ ಅತ್ಯಂತ ಒತ್ತಡಮಯ ಪರಿಸ್ಥಿತಿಯಲ್ಲಿ, ಬಹುಪಾಲು ವಿದ್ಯಾರ್ಥಿಗಳು, ಪೋಷಕರು ಮತ್ತು ಶಿಕ್ಷಕರು ಮರುಪರೀಕ್ಷೆಯನ್ನು ನಡೆಸದಂತೆ ಮತ್ತು ಅಂತಿಮ ರ್‍ಯಾಂಕಿಂಗ್ ಘೋಷಿಸುವ ಮೊದಲು ಪಠ್ಯಕ್ರಮದ ಪ್ರಶ್ನೆಗಳನ್ನು ಪರಿಗಣಿಸದಂತೆ ಒತ್ತಾಯಿಸಿ ದ್ದಾರೆ ಎಂದು ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ಸುಮನ್ ಟಿ.ಎಸ್ ತಿಳಿಸಿದ್ದಾರೆ.

# ಸುಶ್ರಾವ್ಯ ವಿದ್ಯಾಲಯದಿಂದ ಗೀತೆಗಳ ಗಾಯನ ಶಿಬಿರ-'ನಿನಾದ-9'ಕ್ಕೆ ಆಹ್ವಾನ



ದಾವಣಗೆರೆ,ಮೇ 3- ನಗರದ ಸುಶ್ರಾವ್ಯ ಸಂಗೀತ ವಿದ್ಯಾಲಯ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಂಯುಕ್ತಾಶ್ರಯದಲ್ಲಿ ಇದೇ ದಿನಾಂಕ 15 ರಿಂದ 19ರವರೆಗೆ ರವರೆಗೆ ನಾಡಿನ ಹೆಮ್ಮೆಯ ಕವಿ ಬಿ.ಆರ್. ಲಕ್ಷ್ಮಣರಾವ್ ಅವರ ಆಯ್ದ 10 ಗೀತೆಗಳ ಗಾಯನ ತರಬೇತಿ 'ನಿನಾದ-9' ನಡೆಯಲಿದೆ. ಕವಿ ಬಿ.ಆರ್. ಲಕ್ಷ್ಮಣರಾವ್ ಅವರ ಆಯ್ದ 10 ಗೀತೆಗಳ ಗಾಯನವನ್ನು ಕರೋಕೆಯೊಂದಿಗೆ ಹಾಡುವ ತರಬೇತಿ ನೀಡಲಾಗುವುದು. ಸುಶ್ರಾವ್ಯ ಸಂಗೀತ ವಿದ್ಯಾಲಯದ ನಿರ್ದೇಶಕರಾದ ಶ್ರೀಮತಿ ಯಶಾ ದಿನೇಶ್ ಪರಿಕಲ್ಪನೆಯಲ್ಲಿ ನಡೆಯಲಿರುವ ಶಿಬಿರದಲ್ಲಿ ರಸಪ್ರಶ್ನೆ, ಗಾದೆ, ಒಗಟು ಮುಂತಾದ ಚಟುವಟಿಕೆಯೊಂದಿಗೆ ಸವಿಯಲು ರುಚಿಯಾದ ತಿನಿಸು ಇರಲಿವೆ. ವಿವರಕ್ಕೆ ಸಂಪರ್ಕಿಸಿ : 94498 08886.

# ಜಡ್ಜ್ ಮುಂದೆ ಸಂತ್ರಸ್ತೆಯ ಹೇಳಿಕೆ

(1ನೇ ಪುಟದಿಂದ) ಪ್ರಜ್ವಲ್ ರೇವಣ್ಣ ಪರ ವಕೀಲರು ಕಾಲಾವಕಾಶ ಕೇಳಿದ್ದಾರೆ, ಇದಕ್ಕೆ ಅವಕಾಶವಿಲ್ಲ ಎಂಬುದನ್ನು ತಿಳಿಸಿದ್ದೇವೆ. ಮಾಜಿ ಸಚಿವ ರೇವಣ್ಣ ಅವರಿಗೂ 41ಎ ಅಡಿ ನೋಟೀಸ್ ನೀಡಲಾಗಿದೆ, ರೇವಣ್ಣ ಸಹ 24 ಗಂಟೆ ಕಾಲಾವಕಾಶ ಕೇಳಿದ್ದಾರೆ, ಕಾನೂನು ಪ್ರಕಾರ ಮತ್ತೊಂದು ನೋಟೀಸ್ ನೀಡಿದ್ದೇವೆ, ಇದಕ್ಕೆ ಸ್ಪಂದಿಸದಿದ್ದರೆ, ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಪ್ರಜ್ವಲ್ ರೇವಣ್ಣ ವಿರುದ್ಧ ಲುಕ್‌ಔಟ್ ನೋಟಿಸ್ ಹೊರಡಿಸಲಾಗಿದೆ, ಎಲ್ಲ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಿಗೆ ಫೋಟೋ ಸಮೇತ ನೋಟಿಸ್ ಕಳುಹಿಸಲಾಗಿದೆ, ನಿಯಮಾನುಸಾರವೇ ಲುಕ್‌ಔಟ್ ನೋಟಿಸ್ ನೀಡಿದ್ದೇವೆ ಎಂದರು. ರೇವಣ್ಣ ಅವರ ಮನೆ ಮೇಲೆ ಎಸ್‌ಐಟಿ ದಾಳಿ ನಡೆದಿರುವುದು ಗೊತ್ತಿಲ್ಲ, ಪ್ರಜ್ವಲ್ ರೇವಣ್ಣ ದುಬೈಗೆ ಹೋಗಿರುವುದೂ ಗೊತ್ತಿಲ್ಲ, ಜರ್ಮನಿಗೆ ಹೋಗಿದ್ದಾರೆ ಎಂಬ ಮಾಹಿತಿ ಇದೆ ಎಂದರು.

ಜರ್ಮನಿಯಿಂದ ಕರೆತರಲು ಕೇಂದ್ರದ ನೆರವು ಬೇಕು, 2ನೇ ನೋಟಿಸ್‌ಗೂ ಸ್ಪಂದಿಸದಿದ್ದರೆ ಮುಂದಿನ ತೀರ್ಮಾನ ಏನು ಎಂಬುದನ್ನು ಎಸ್‌ಐಟಿ ಅಧಿಕಾರಿಗಳು ಕೈಗೊಳ್ಳುತ್ತಾರೆ ಎಂದು ಹೇಳಿದರು.

ರಾಜಕೀಯ ಟೀಕೆಗಳಿಗೆ ಉತ್ತರ ಕೊಡುವುದಿಲ್ಲ, ನನಗೂ ಒಂದಷ್ಟು ಜವಾಬ್ದಾರಿಗಳಿವೆ, ಆದ್ದರಿಂದ ರಾಜಕೀಯ ಪ್ರತಿಕ್ರಿಯೆ ನೀಡುವುದಿಲ್ಲ.

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಯಾವ ಅಧಾರದ ಮೇಲೆ ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ ಎಂಬುದು ಗೊತ್ತಿಲ್ಲ, ಇದಕ್ಕೆ ಮುಖ್ಯಮಂತ್ರಿ ಹಾಗೂ ಪಕ್ಷದ ಅಧ್ಯಕ್ಷರು ಉತ್ತರಿಸುತ್ತಾರೆ ಎಂದರು.

# ವಿನಯ್ ಕುಮಾರ್‌ಗೆ ಬೆಂಬಲಿಸಲು ಕರೆ

ದಾವಣಗೆರೆ, ಮೇ 2 - ಪಕ್ಷೇತರ ಅಭ್ಯರ್ಥಿ ಜಿ.ಬಿ. ವಿನಯ್ ಕುಮಾರ್ ಅವರಿಗೆ ಮತ ನೀಡುವಂತೆ ನಗರಸಭೆ ಮಾಜಿ ಸದಸ್ಯರಾದ ಶಾಮನೂರು ಗೀತಾ ಮುರುಗೇಶ್ ಅವರು ಪತ್ರಿಕಾಗೋಷ್ಠಿಯಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮುಕ್ತಿಯಾರ್ ಅಹಮದ್ ಉಪಸ್ಥಿತರಿದ್ದರು.

**HOUSE FOR RENT / LEASE**
# 1998/70, 1st main, 15th Cross,
Taralabalu Badavane, Vidya Nagara,
**20x30, First Floor, North Facing**
**(Lucky House) Only Veg Aproved**
Bore Water Or River Water,
Car Parking Facility
**Guruprasad D.P,** ಮೊ. 87470 21999

**ಹೃದಯಪೂರ್ವಕ ಸ್ವಾಗತ**




# ಜನರ ನಿರೀಕ್ಷೆಯನ್ನು ಹುಸಿ ಮಾಡಿರುವ ಸಂಸದರನ್ನು ಇಂದು ಬದಲಾಯಿಸದೇ ಇದ್ದಲ್ಲಿ ಅಭಿವೃದ್ಧಿ ಸಾಧ್ಯವಿಲ್ಲ

## ಹರಪನಹಳ್ಳಿ ತಾಲ್ಲೂಕಿನ ಪ್ರಚಾರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್



ಹರಪನಹಳ್ಳಿ, ಮೇ 3 - ಕಳೆದ 4 ಬಾರಿ ಒಬ್ಬರನ್ನೇ ಆಯ್ಕೆ ಮಾಡಿದ ಈ ಕ್ಷೇತ್ರದ ಜನತೆಯ ನಿರೀಕ್ಷೆಯನ್ನು ಹುಸಿ ಮಾಡಿರುವ ಸಂಸದರನ್ನು ಇಂದು ಬದಲಾಯಿಸದೇ ಇದ್ದಲ್ಲಿ ಅಭಿವೃದ್ಧಿ ಸಾಧ್ಯವಿಲ್ಲ ಎಂದು ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಹರಪನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನಿಚ್ಚವ್ವನಹಳ್ಳಿ, ಕಡಬಗೆರೆ, ಸಾಸ್ವಿಹಳ್ಳಿ, ಮತ್ತಿಹಳ್ಳಿ, ಮೈದೂರು, ನಂದಿಬೇವೂರು, ಚಿಗಟೇರಿ, ಬಳಿಗನೂರು, ಬೆಣ್ಣೆಹಳ್ಳಿ ಗ್ರಾಮಗಳ ನಂತರ ಹರಪನಹಳ್ಳಿ ಪಟ್ಟಣದಲ್ಲಿ ಇಂದು ನಡೆದ ಪ್ರಚಾರ ಸಭೆಯಲ್ಲಿ ಮತದಾರರನ್ನುದ್ದೇಶಿಸಿ ಅವರು ಮಾತನಾಡಿದರು.

ನೀವು ಆಯ್ಕೆ ಮಾಡಿದ ಸಂಸದರು ಈ ಭಾಗದ ಯಾವುದೇ ಸಮಸ್ಯೆಗೂ ಸ್ಪಂದಿಸದೇ ಸುಮಾರು 20 ವರ್ಷ ಕಾಲಹರಣ ಮಾಡಿದ್ದು, ಇಂತಹ ಸಂಸದರನ್ನು ಆ ಪಕ್ಷವೇ ಬದಲಾಯಿಸಿ ಅವರ ಕುಟುಂಬಕ್ಕೆ ಮಣೆ ಹಾಕಿದ್ದು, ಈಗ ಆ ಕುಟುಂಬವನ್ನು ಮತದಾರರಾದ ತಾವು ಬದಲಿಸಬೇಕು ಎಂದು ಕರೆ ನೀಡಿದರು.

ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ತರುವ ಭರವಸೆ ನೀಡಿತ್ತು. ಅದರಂತೆ ಸರ್ಕಾರ ಬಂದ ತಕ್ಷಣ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಇಂದು ಹರಪನಹಳ್ಳಿ ವಿಧಾನಸಭಾ ಕ್ಷೇತ್ರವೊಂದಕ್ಕೆ ಮಾರ್ಚ್ ಅಂತ್ಯಕ್ಕೆ ಸುಮಾರು ರೂ.164 ಕೋಟಿಯಷ್ಟು ಹಣವನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ಎಂದ ಅವರು ಅನೇಕ ಮಹಿಳೆಯರು ಇಂದು ತಮ್ಮ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುತ್ತಿದ್ದಾರೆ. ಸ್ವಾವಲಂಬಿ ಜೀವನ ಸಾಗಿಸುತ್ತಿದ್ದಾರೆ ಎಂದರು.

ಇನ್ನು ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 'ಪಂಚ ನ್ಯಾಯ ಪಚ್ಚೀಸ್ ಗ್ಯಾರೆಂಟಿ' ಭರವಸೆಗಳನ್ನು ನೀಡಲಾಗಿದ್ದು, ಯುವ ನ್ಯಾಯದಡಿ ಯುವಕರಿಗೆ ಉದ್ಯೋಗ, ಮಹಿಳಾ ನ್ಯಾಯದಡಿ ಪ್ರತಿ ಮಹಿಳೆಗೆ 1 ಲಕ್ಷ ರೂ., ರೈತ ನ್ಯಾಯದಡಿ ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸುವುದು, ನರೇಗಾ ಕೂಲಿ ಹಣವನ್ನು ರೂ. 400 ಕ್ಕೆ ಹೆಚ್ಚಿಸಲಾಗುವುದು ಸೇರಿದಂತೆ ಹಲವು ಯೋಜನೆಗಳನ್ನು ಪ್ರಣಾಳಿಕೆಯಲ್ಲಿ ಘೋಷಿಸಲಾಗಿದ್ದು, ಅದರಂತೆ ನಾವುಗಳು ಜಾರಿಗೆ ತರುತ್ತೇವೆ ಎಂದರು.

ಹರಪನಹಳ್ಳಿ ಶಾಸಕರಾದ ಶ್ರೀಮತಿ ಲತಾ ಮಲ್ಲಿಕಾರ್ಜುನ್ ಮಾತನಾಡಿ, ಹಿಂದಿನ ಸಂಸದರಿಂದ ನಮ್ಮ ಭಾಗಕ್ಕೆ ಏನೂ ಉಪಯೋಗವಾಗಿಲ್ಲ. ಇಂತಹವರಿಗೆ ಮತ ನೀಡಿದರೆ ನಮ್ಮ ಮತ ವ್ಯರ್ಥವಾದಂತೆ. ನಮ್ಮ ಮತ ಈ ಕ್ಷೇತ್ರದ ಪ್ರತಿನಿಧಿಯನ್ನು ಬದಲಾಯಿಸಬೇಕೆಂದರು.

ಡಾ|| ಪ್ರಭಾ ಮಲ್ಲಿಕಾರ್ಜುನ್ ಅವರು ಸಾಮಾಜಿಕ ಕಳಕಳಿಯುಳ್ಳ ವ್ಯಕ್ತಿತ್ವ ಹೊಂದಿರುವವರು. ಅವರು ಈ ಕ್ಷೇತ್ರವನ್ನು ಪ್ರತಿನಿಧಿಸಿದರೆ ಹರಪನಹಳ್ಳಿ ಅಭಿವೃದ್ಧಿ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದರು.

ಅರಸೀಕೆರೆ ಕೊಟ್ರೇಶ್ ಮಾತನಾಡಿ, ಬಿಜೆಪಿಯಿಂದ ಈ ಕ್ಷೇತ್ರಕ್ಕೆ ಮತ್ತು ನಮಗೆ ತುಂಬಾ ಅನ್ಯಾಯವಾಗಿದ್ದು, ಇದು ಮತದಾರರಿಗೆ ತಿಳಿದಿದ್ದು, ಬಿಜೆಪಿ ವಿರುದ್ಧ ನಾವು ಸೇಡು ತೀರಿಸಿಕೊಳ್ಳಬೇಕಾದರೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಮತ ನೀಡಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಎಂ.ವಿ.ಅಂಜಿನಪ್ಪ, ಕುಬೇರಪ್ಪ ಬಿ.ಕೆ.ಪ್ರಕಾಶ್ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಪ್ರಜ್ವಲ್, ರೇವಣ್ಣ ವಿರುದ್ಧ ಪ್ರಕರಣ

(1ನೇ ಪುಟದಿಂದ) ಈ ನಡುವೆ, ಜಾಮೀನಿಗಾಗಿ ಬೆಂಗಳೂರು ಸೆಷನ್ಸ್ ನ್ಯಾಯಾಲಯದ ಎದುರು ದಾಖಲಿಸಿದ್ದ ಜಾಮೀನು ಅರ್ಜಿಯನ್ನು ರೇವಣ್ಣ ವಾಪಸ್ ಪಡೆದಿದ್ದಾರೆ. ತಮ್ಮ ಹಾಗೂ ಪುತ್ರ ಪ್ರಜ್ವಲ್ ವಿರುದ್ಧ ದಾಖಲಾದ ಲೈಂಗಿಕ ಪೀಡನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರು ಜಾಮೀನು ಅರ್ಜಿ ದಾಖಲಿಸಿದ್ದರು.

ಜೆಡಿಎಸ್ ಕಾರ್ಯಕರ್ತೆಯೊಬ್ಬರು ಬೆಂಗಳೂರಿನಲ್ಲಿ ಸಿ.ಐ.ಡಿ. ಎದುರು ಎಫ್.ಐ.ಆರ್. ದಾಖಲಿಸಿದ್ದು, ಪ್ರಜ್ವಲ್ ಬಂದೂಕು ತೋರಿಸಿ ಅತ್ಯಾಚಾರ ಎಸಗಿರುವುದಾಗಿ ತಿಳಿಸಿದ್ದಾರೆ. ಅತ್ಯಾಚಾರದ ವಿಡಿಯೋ ಬಳಸಿಕೊಂಡು ಬೆದರಿಸಿ ಲೈಂಗಿಕ ಶೋಷಣೆ ಮಾಡಿರುವುದಾಗಿಯೂ ತಿಳಿಸಿದ್ದಾರೆ. ಮೈಸೂರಿನಲ್ಲಿ ಗುರುವಾರ ರಾತ್ರಿ ರೇವಣ್ಣ ಹಾಗೂ ಅವರ ನಿಕಟವರ್ತಿ ಸತೀಶ್ ಬಾಬಣ್ಣ ವಿರುದ್ಧ ಮಹಿಳೆಯೊಬ್ಬರನ್ನು ಅಪಹರಿಸಿದ ಪ್ರಕರಣ ದಾಖಲಿಸಲಾಗಿದೆ.

ಆರು ವರ್ಷಗಳ ಹಿಂದೆ ಮಹಿಳೆಯೊಬ್ಬರು ಹೊಳೆನರಸೀಪುರದಲ್ಲಿ ರೇವಣ್ಣ ಮನೆಯಲ್ಲಿ ಕೆಲಸ ಮಾಡುತ್ತಿದ್ದರು. ಮೂರು ವರ್ಷಗಳ ಹಿಂದೆ ಕೆಲಸ ಬಿಟ್ಟು ಮರಳಿದ್ದರು. ಈ ಮಹಿಳೆಯನ್ನು ಕಟ್ಟಿ, ಅವರ ಮೇಲೆ ಪ್ರಜ್ವಲ್ ಅತ್ಯಾಚಾರ ಮಾಡಿದ ವಿಡಿಯೋ ಬೆಳಕಿಗೆ ಬಂದಿದೆ ಎಂದು ಮಹಿಳೆಯ ಪುತ್ರ ನೀಡಿದ ದೂರಿನಲ್ಲಿ ತಿಳಿಸಲಾಗಿದೆ.

ಐದು ದಿನಗಳ ಹಿಂದೆ ರೇವಣ್ಣ ನಿಕಟವರ್ತಿ ಬಾಬಣ್ಣ ನನ್ನ ಮನೆಗೆ ಬಂದು ಪೊಲೀಸರ ಬಳಿ ಯಾವುದೇ ಮಾಹಿತಿ ಬಹಿರಂಗ ಪಡಿಸದಂತೆ ತಿಳಿಸಿದ್ದ. ಮಾಹಿತಿ ಏನಾದರೂ ಬಹಿರಂಗ ಪಡಿಸಿದರೆ ಸಮಸ್ಯೆ ಎದುರಿಸಬೇಕಾಗುತ್ತದೆ, ಎಂದು ಎಚ್ಚರಿಕೆ ನೀಡಿದ್ದ. ರೇವಣ್ಣ ಹೇಳಿದಂತೆ ತಾಯಿಯನ್ನು ಕರೆದುಕೊಂಡು ಹೋಗುವುದಾಗಿ ತಿಳಿಸಿದ್ದ. ತಾಯಿ ಎಲ್ಲಿದ್ದಾರೋ ಗೊತ್ತಿಲ್ಲ ಎಂದು ಪುತ್ರ ದೂರಿನಲ್ಲಿ ಹೇಳಿದ್ದಾರೆ.

ತಾಯಿಯ ಜೀವಕ್ಕೆ ಬೆದರಿಕೆ ಇದೆ. ಅವರನ್ನು ಹುಡುಕಲು ಹಾಗೂ ರಕ್ಷಿಸಲು ನೆರವಾಗಬೇಕು ಎಂದು ದೂರಿನಲ್ಲಿ ತಿಳಿಸಲಾಗಿದೆ.

ದೂರಿನ ನಂತರ ಬಾಬಣ್ಣನನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ನಡುವೆ ಹೇಳಿಕೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಜ್ವಲ್ ಪ್ರಕರಣ ಕೇವಲ ಲೈಂಗಿಕ ಪೀಡನೆಯ ಪ್ರಕರಣವಲ್ಲ. ಅತ್ಯಾಚಾರ ಪ್ರಕರಣ ದಾಖಲಾಗಿದೆ ಎಂದಿದ್ದಾರೆ.

ಮಹಿಳೆ ಅತ್ಯಾಚಾರದ ಬಗ್ಗೆ ಸುಳ್ಳು ಹೇಳುವುದಿಲ್ಲ. ದೂರು ನೀಡಿದ ನಂತರ ಅವರ ಜೀವನ ಹಾಳಾಗುವುದಿಲ್ಲವೇ? ವಿವಾಹಿತ ಮಹಿಳೆಯೊಬ್ಬರು ಅತ್ಯಾಚಾರ ನಡೆದಿದೆ ಎಂದು ಬಹಿರಂಗವಾಗಿ ಹೇಳುವಾಗ ಒಪ್ಪಿಕೊಳ್ಳಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

# ಕಾಂಗ್ರೆಸ್‌ನಿಂದ ಮಾತ್ರ ಅಭಿವೃದ್ಧಿ ಸಾಧ್ಯ : ಎಸ್ಸೆಸ್

## ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಪರ ರೋಡ್ ಷೋ



ದಾವಣಗೆರೆ, ಮೆ 3 - ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ 13, 19, 20 ಮತ್ತು 21ನೇ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಪರವಾಗಿ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರು ನಿನ್ನೆ ಭರ್ಜರಿ ರೋಡ್ ಷೋ ನಡೆಸಿದರು.

ನಂತರ ಮಾತನಾಡಿದ ಎಸ್ಸೆಸ್, ಈ ದೇಶದಲ್ಲಿ ಏನೇ ಅಭಿವೃದ್ಧಿ ಆಗಿದ್ದರೂ ಅದು ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿ ಮಾತ್ರ. ಬಿಜೆಪಿ 10 ವರ್ಷಗಳ ಆಡಳಿತದಲ್ಲಿ ಕಾಂಗ್ರೆಸ್ 60 ವರ್ಷದ ಆಡಳಿತದಲ್ಲಿ ಮಾಡಿದ ಆಸ್ತಿಗಳನ್ನು ಮಾರಾಟ ಮಾಡಿದ್ದೇ ಸಾಧನೆ ಎಂದರು.

ಬಿಜೆಪಿ ಸರ್ಕಾರ 10 ವರ್ಷಗಳ ಕಾಲ ದೇಶದ ಆಡಳಿತ ಚುಕ್ಕಾಣಿ ಹಿಡಿದು ದೇಶದ ಅಸ್ತಿತ್ವವನ್ನೇ ಹಾಳು ಮಾಡಿದರು. ಇಂದು ದೇಶದಲ್ಲಿ ಜನರು ನೆಮ್ಮದಿ ಇಲ್ಲದ ಜೀವನ ನಡೆಸುತ್ತಿದ್ದು, ಇಂತಹ ವ್ಯವಸ್ಥೆ ತೆಗೆದು ಹಾಕಲು ಈಗಾಗಲೇ ಜನರು ತೀರ್ಮಾನಿಸಿದ್ದು, ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿ ನೆಮ್ಮದಿ ಜೀವನ ನಡೆಸಬಹುದು ಎಂದರು.

ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ತರುವ ಭರವಸೆ ನೀಡಿತ್ತು. ಅದರಂತೆ ಸರ್ಕಾರ ಬಂದ ತಕ್ಷಣ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಇಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರವೊಂದಕ್ಕೆ ಮಾರ್ಚ್ ಅಂತ್ಯಕ್ಕೆ ಸುಮಾರು ರೂ.122 ಕೋಟಿಯಷ್ಟು ಹಣವನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ಎಂದರು.

ಇನ್ನು ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 'ಪಂಚ ನ್ಯಾಯ ಪಚ್ಚೀಸ್ ಗ್ಯಾರೆಂಟಿ' ಭರವಸೆಗಳನ್ನು ನೀಡಲಾಗಿದ್ದು, ಯುವ ನ್ಯಾಯದಡಿ ಯುವಕರಿಗೆ ಉದ್ಯೋಗ, ಮಹಿಳಾ ನ್ಯಾಯದಡಿ ಪ್ರತಿ ಮಹಿಳೆಗೆ 1 ಲಕ್ಷ ರೂ., ರೈತ ನ್ಯಾಯದಡಿ ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸುವುದು, ನರೇಗಾ ಕೂಲಿ ಹಣವನ್ನು ರೂ. 400 ಕ್ಕೆ ಹೆಚ್ಚಿಸಲಾಗುವುದು ಸೇರಿದಂತೆ ಹಲವು ಯೋಜನೆಗಳನ್ನು ಪ್ರಣಾಳಿಕೆಯಲ್ಲಿ ಘೋಷಿಸಲಾಗಿದ್ದು, ಅದರಂತೆ ನಾವುಗಳು ಜಾರಿಗೆ ತರುತ್ತೇವೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಯೂಬ್ ಪೈಲ್ವಾನ್, ಮಹಾನಗರ ಪಾಲಿಕೆ ಸದಸ್ಯರುಗಳಾದ ಮೀನಾಕ್ಷಿ ಜಗದೀಶ್, ಸೌಮ್ಯ ನರೇಂದ್ರ, ಶಿವಲೀಲಾ ಕೊಟ್ರಯ್ಯ, ಕೆ.ಚಮನ್‌ಸಾಬ್, ಸೈಯದ್ ಚಾರ್ಲಿ, ಮಾಜಿ ಸದಸ್ಯ ಪರಸಪ್ಪ, ಮುಖಂಡರುಗಳಾದ ಲಾಲ್ ಆರೀಫ್, ಸಾವನ್ ಜೈನ್, ಅಜ್ಜಪ್ಪ, ಧರ್ಮಣ್ಣ, ಬಡೇಸಾಬ್, ರಘು ಡಿ., ಮಾಜಿ ಸಂಸದ ಕೆ.ಸಿ.ಕೊಂಡಯ್ಯ, ಉದ್ಯಮಿಗಳಾದ ಅಥಣಿ ಎಸ್. ವೀರಣ್ಣ, ಎಸ್.ಕೆ.ವೀರಣ್ಣ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ, ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಗರದಲ್ಲಿ ಇಂದು ಗೀತ ಗಾಯನ ತರಬೇತಿ ಶಿಬಿರ

ಶರಧಿ ಕಲಾ ಸಾಂಸ್ಕೃತಿಕ ಸಂಸ್ಥೆ ಮತ್ತು ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆರ್.ಹೆಚ್.ಗೀತಾ ಮಂದಿರದಲ್ಲಿ ಇಂದು ಬೆಳಗ್ಗೆ 10ಕ್ಕೆ ವಸಂತ ಋತು ಬೇಸಿಗೆ ರಜೆ ಪ್ರಯುಕ್ತ ಗೀತಾ ಗಾಯನ ತರಬೇತಿ ಶಿಬಿರ ನಡೆಯಲಿದೆ ಎಂದು ಕಲಾಕುಂಚದ ಅಧ್ಯಕ್ಷ ಕೆ.ಎಚ್. ಮಂಜುನಾಥ್ ತಿಳಿಸಿದ್ದಾರೆ.

ನಾಡಿನ ಸಂಗೀತ ನಿರ್ದೇಶಕರೂ, ಹಿರಿಯ ಗಾಯಕರಾದ ಉಪಾಸನಾ ಮೋಹನ್ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ.

ಅಧ್ಯಕ್ಷತೆಯನ್ನು ಶರಧಿ ಕಲಾ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ವಿದುಷಿ ಶ್ರೀಮತಿ ಶೋಭಾರಂಗನಾಥ್ ವಹಿಸಿಕೊಳ್ಳಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಾಲಿಗ್ರಾಮ ಗಣೇಶ್‌ಶೆಣೈ, ಅಜಯ್ ನಾರಾಯಣ್, ಹಿರಿಯ ಗಾಯಕಿ ಶ್ರೀಮತಿ ಮಾಧುರಿ ಶೇಷಗಿರಿ, ಶ್ರೀಮತಿ ಜ್ಯೋತಿ ಗಣೇಶ್‌ಶೆಣೈ ಭಾಗವಹಿಸುವರು.

# ಶಾಶ್ವತ ಅಭಿವೃದ್ಧಿಗಾಗಿ ಪ್ರಣಾಳಿಕೆ ಸಿದ್ಧಪಡಿಸಿರುವೆ

## ಹರಿಹರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ರೋಡ್ ಷೋ



ಹರಿಹರ, ಮೇ 3- ಕಳೆದ ಹಲವಾರು ವರ್ಷಗಳಿಂದ ದಾವಣಗೆರೆ ಜಿಲ್ಲೆಯಲ್ಲಿ ಸಂಸದರು ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕಾರ್ಯಗಳನ್ನು ಮಾಡದೇ, ಶೂನ್ಯ ಸಾಧನೆ ಮಾಡಿದ್ದು, ಜಿಲ್ಲೆಯ ಜನರು ಅರಿತಿದ್ದು, ಆದ್ದರಿಂದ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ದೃಷ್ಟಿಯಿಂದ ನನಗೆ ಬಾರಿ ಬಹುಮತದೊಂದಿಗೆ ಗೆಲ್ಲಿಸುತ್ತಾರೆ ಎಂಬ ವಿಶ್ವಾಸವನ್ನು ಹೊಂದಿರುವುದಾಗಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ನಗರದಲ್ಲಿ ಕಾಂಗ್ರೆಸ್ ವತಿಯಿಂದ ಇಂದು ನಡೆದ ರೋಡ್ ಷೋನಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದಾವಣಗೆರೆ ಜಿಲ್ಲೆಯಲ್ಲಿ ಸಂಸದರು ಹಲವು ಬಾರಿ ಗೆದ್ದರು. ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕಾರ್ಯಗಳನ್ನು ಮಾಡದಿರುವುದು ಮತ್ತು ತಮ್ಮ ಅಧಿಕಾರದ ಅವಧಿಯಲ್ಲಿ ಜಿಲ್ಲೆಯ ಜನತೆಯ ಕಷ್ಟಗಳ ಬಗ್ಗೆ ಸಂಸತ್ತು ಭವನದಲ್ಲಿ ಧ್ವನಿ ಎತ್ತದೇ ಇರುವುದನ್ನು ಜಿಲ್ಲೆಯ ಜನರು ಅರಿತುಕೊಂಡಿದ್ದಾರೆ.

ಕೇಂದ್ರದಲ್ಲಿ ಆಡಳಿತ ಮಾಡುತ್ತಿರುವ ಬಿಜೆಪಿ ಸರ್ಕಾರ ಕೂಡ ತಮ್ಮ ಆಡಳಿತ ಅವಧಿಯಲ್ಲಿ ದಿನ ಬಳಕೆ ವಸ್ತುಗಳಾದ ದಿನಸಿ ಪದಾರ್ಥಗಳು, ಸಿಲಿಂಡರ್, ಪೆಟ್ರೋಲ್, ಡೀಸೆಲ್, ಗೊಬ್ಬರ, ಔಷಧಿ ಸೇರಿದಂತೆ ಎಲ್ಲವನ್ನೂ ಗಗನಕ್ಕೆ ಏರಿಸುತ್ತಾ ಬಂದಿದ್ದು, ಇತ್ತ ದುಡಿಯುವ ವರ್ಗದವರಿಗೆ ಉದ್ಯೋಗವನ್ನೂ ನೀಡದೇ, ಜನರಿಗೆ ಕೊಟ್ಟ ಭರವಸೆಯನ್ನು ಈಡೇರಿಸಲು ಆಗದೇ ಬರಿ ಸುಳ್ಳು ಹೇಳಿಕೊಂಡು ಬಂದು ದೇಶದ ಜನರ ನೆಮ್ಮದಿ ಹಾಳು ಮಾಡಿದರು ಎಂದು ಹೇಳಿದರು.

ನಾನು ಕಳೆದ ಒಂದೂವರೆ ತಿಂಗಳಿಂದ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಓಡಾಡಿದ್ದು, ಅದರಲ್ಲಿ ಹರಿಹರ ನಗರಕ್ಕೆ ಸಾಕಷ್ಟು ಭೇಟಿಕೊಟ್ಟು ಇಲ್ಲಿನ ಸಮಸ್ಯೆಗಳನ್ನು ಅರಿತಿರುವೆ. ನಾನು ಗೆದ್ದು ಸಂಸದೆ ಆದರೆ, ಕ್ಷೇತ್ರದ ಅಭಿವೃದ್ಧಿಗೆ ಒಬ್ಬ ಶಾಸಕರು ಹೇಗೆ ಅಭಿವೃದ್ಧಿ ಕಾರ್ಯಗಳಿಗೆ ಒತ್ತನ್ನು ನೀಡಲಾಗುತ್ತದೆ.

ಆ ತರಹದ ಮಾದರಿಯಲ್ಲಿ ಹರಿಹರ ತಾಲ್ಲೂಕು ಅಭಿವೃದ್ಧಿ ಪಡಿಸಲಾಗುತ್ತದೆ. ಜೊತೆಗೆ ಪ್ರಮುಖವಾಗಿ ಕುಡಿಯುವ ನೀರಿನ ಶುದ್ಧೀಕರಣಾ ಘಟಕ, ಸುಸಜ್ಜಿತ ರಸ್ತೆ, ಕೈಗಾರಿಕೆ, ಭೈರನಪಾದ ಏತ ನೀರಾವರಿ ಯೋಜನೆ ಹೀಗೆ ಹತ್ತು ಹಲವು ಬಗೆಯ ಅಭಿವೃದ್ಧಿ ಕಾರ್ಯಗಳನ್ನು ಮಾಡಲಿಕ್ಕೆ ನಾನೇ ಸ್ವಂತ ಅಭಿವೃದ್ಧಿ ಚಿಂತನೆ ಮಾಡಿ, ಪ್ರಣಾಳಿಕೆ ಸಿದ್ಧ ಮಾಡಿಕೊಂಡಿರುವೆ ಎಂದು ಹೇಳಿದರು.

ಮಾಜಿ ಶಾಸಕ ಎಸ್.ರಾಮಪ್ಪ ಮಾತನಾಡಿ, ಬಿಜೆಪಿ ಹತ್ತು ವರ್ಷಗಳಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಮಾಡಿಲ್ಲ. 25 ವರ್ಷದಲ್ಲಿ ದಾವಣಗೆರೆ ಸಂಸದರೂ ಕೂಡ ಏನು ಅಭಿವೃದ್ಧಿ ಮಾಡಿಲ್ಲ. ದೇಶದ ಶ್ರೀಮಂತ ವರ್ಗದವರಿಗೆ ಮನ್ನಣೆಯನ್ನು ಕೊಡುವಂತಹ ಬಿಜೆಪಿ ಸರ್ಕಾರಕ್ಕೆ ಮತವನ್ನು ಕೊಡದೇ ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷಕ್ಕೆ ಮತವನ್ನು ನೀಡಬೇಕು ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ವಕ್ತಾರರಾದ ಯು.ಟಿ. ಫರ್ಜಾನಾ ಮಾತನಾಡಿ, ಕಾಂಗ್ರೆಸ್ ಪಕ್ಷವು ಮಹಿಳೆಯರಿಗೆ ಶಕ್ತಿಯನ್ನು ತುಂಬುವ ಕೆಲಸವನ್ನು ಮಾಡಿದ್ದು, ಗ್ಯಾರಂಟಿ ಯೋಜನೆಗಳು ಸಮಾಜಕ್ಕೆ ನೀಡಿದ ಆಕ್ಸಿಜನ್ ಇದ್ದಂತೆ ಆಗಿದೆ. ಗುಜರಾತಿನಲ್ಲಿ ಬೋಗಸ್ ಮಾಡಲ್ ಮಾದರಿ ನೋಡಿ ಜನರು ಬೇಸತ್ ಹೋಗಿದ್ದಾರೆ. ಆಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವ ಮೂಲಕ ದೇಶವನ್ನು ಉಳಿಸುವಂತಹ ಕೆಲಸವನ್ನು ಮತದಾರರು ಮಾಡಬೇಕು ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಮುಖಂಡ ನಂದಿಗಾವಿ ಶ್ರೀನಿವಾಸ್ ಮಾತನಾಡಿ, ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಐದು ಚುನಾವಣೆಯಲ್ಲಿ ತೊಡಗಿಸಿಕೊಂಡು ಪಕ್ಷದ ಪರವಾಗಿ ಕೆಲಸವನ್ನು ಮಾಡಿದ್ದಾರೆ. ಜೊತೆಗೆ ಆರೋಗ್ಯ ರಕ್ಷಣೆ ಜೊತೆಗೆ ಸಾಕಷ್ಟು ಸಮಾಜಮುಖಿ ಕಾರ್ಯಗಳನ್ನು ಮಾಡಿದ್ದಾರೆ.

ಹರಿಹರ ನಗರದಲ್ಲಿ ಕೂಡ ಡೈಯಾಲಿಸಿಸ್ ಕೇಂದ್ರ ಸ್ಥಾಪನೆ ಮಾಡಲಿಕ್ಕೆ ಮುಂದಾಗಿದ್ದಾರೆ. ಜೊತೆಗೆ ಇನ್ನೂ ಸಾಕಷ್ಟು ಯೋಜನೆಗಳನ್ನು ರೂಪಿಸಲು ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಹೆಚ್ಚು ಮತವನ್ನು ಹಾಕುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವಂತೆ ಹೇಳಿದರು.

ಈ ಸಂದರ್ಭದಲ್ಲಿ ಗುತ್ತೂರು ಜಿ.ಬಿ.ಹಾಲೇಶಗೌಡ್ರು, ನಿಖಿಲ್ ಕೊಂಡಜ್ಜಿ, ಬಿ.ರೇವಣಸಿದ್ದಪ್ಪ, ಎಂ. ನಾಗೇಂದ್ರಪ್ಪ, ಟಿ.ಜೆ.ಮುರುಗೇಶಪ್ಪ, ಶಂಕರ್ ಖಟಾವ್ಕರ್, ಎ.ಬಿ.ವಿಜಯಕುಮಾರ್, ಕೆ.ಜಿ.ಸಿದ್ದೇಶ್, ಎಸ್.ಎಂ.ವಸಂತ್, ರೇವಣಸಿದ್ದಪ್ಪ ಅಮರಾವತಿ, ಸಿ. ಎನ್.ಹುಲಿಗೇಶ್, ರಜನಿಕಾಂತ್, ಕೆ.ಬಿ.ರಾಜಶೇಖರ್, ಮಹಮ್ಮದ್ ಸಿಗ್ಬತ್ ಉಲ್ಲಾ, ಎಲ್.ಬಿ. ಹನುಮಂತಪ್ಪ, ಬಿ.ಕೆ. ಸೈಯದ್ ರೆಹಮಾನ್, ಏಜಾಜ್ ಅಹ್ಮದ್, ನಸ್ರೂಲ್, ವಿಜಯಕುಮಾರ್, ಹನುಮಂತಪ್ಪ ಕೊತ್ವಾಲ್, ಎಂ.ಎಸ್.ಆನಂದ್ ಕುಮಾರ್, ಸನಾವುಲ್ಲಾ ಸಾಬ್, ಬಿ.ಕೆ. ಬಾಷಾ, ಕಿರಣ್ ಭೂತೆ, ರಘುಪತಿ, ಸಂತೋಷ ನೋಟದರ್, ಸಚಿನ್ ಕೊಂಡಜ್ಜಿ, ರಾಘವೇಂದ್ರ ಕೊಂಡಜ್ಜಿ, ಅರುಣ್ ಬೊಂಗಾಳೆ, ಹಾಜಿಹಾಲಿ, ಹೆಚ್. ಶಿವಪ್ಪ, ನಾಗಮ್ಮ, ಭಾಗ್ಯಮ್ಮ, ವಿದ್ಯಾ ಸವಿತಾ, ಮಾಲಾ, ನೇತ್ರಾವತಿ ಇತರರು ಹಾಜರಿದ್ದರು.

# ಪ್ರತಿ ಗ್ರಾಮಗಳಲ್ಲಿಯೂ ಶುದ್ಧ ನೀರಿನ ಘಟಕ

## ಹೊನ್ನಾಳಿ ತಾ.ನ ಪ್ರಚಾರದಲ್ಲಿ ಪಕ್ಷೇತರ ಅಭ್ಯರ್ಥಿ ವಿನಯ್ ಕುಮಾರ್



ಹೊನ್ನಾಳಿ, ಮೇ 3 - ಮಧ್ಯಕರ್ನಾಟಕದ ಹೆಬ್ಬಾಗಿಲು ದಾವಣಗೆರೆ ಜಿಲ್ಲೆ. ಆದ್ರೆ, ಇಲ್ಲಿ ಐಟಿ-ಬಿಟಿ, ದೊಡ್ಡ ದೊಡ್ಡ ಕೈಗಾರಿಕೆಗಳು ಇದುವರೆಗೂ ಬಂದಿಲ್ಲ. ಇದಕ್ಕೆ ಇಷ್ಟು ದೀರ್ಘಕಾಲ ಆಡಳಿತ ನಡೆಸಿರುವವರಿಗೆ ರಾಜಕೀಯ ಇಚ್ಛಾಶಕ್ತಿ, ಬದ್ಧತೆ ಕೊರತೆಯೇ ಕಾರಣ ಎಂದು ದಾವಣಗೆರೆ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಜಿ. ಬಿ. ವಿನಯ್ ಕುಮಾರ್ ಬೇಸರ ವ್ಯಕ್ತಪಡಿಸಿದರು.

ಹೊನ್ನಾಳಿ - ನ್ಯಾಮತಿ ಅವಳಿ ತಾಲ್ಲೂಕಿನ ಬೆಳಲಗೆರೆ ಗ್ರಾಮದಲ್ಲಿ ಜನರನ್ನುದ್ದೇಶಿಸಿ ಮಾತನಾಡಿದ ಅವರು, ಪ್ರತಿ ಗ್ರಾಮಗಳಲ್ಲಿಯೂ ಶುದ್ಧ ನೀರಿನ ಘಟಕ ಸ್ಥಾಪನೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ನೀರಾವರಿ ಯೋಜನೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ ಕೊಟ್ಟು, ರೈತರಿಗೆ ಅನುಕೂಲ ಮಾಡಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಕಾಂಗ್ರೆಸ್ ಟಿಕೆಟ್ ಕೈ ತಪ್ಪಿದಾಗ ರಾಜಕೀಯದಲ್ಲಿ ಮುಂದೇನು ಮಾಡಬೇಕೆಂಬ ಪ್ರಶ್ನೆ ಬಂತು. ಆಗ ಜನರ ಬಳಿಗೆ ಮತ್ತೆ ಹೋದೆ. ಮುಂದಿನ ನಡೆ ಬಗ್ಗೆ ಕೇಳಿದೆ.

ಸ್ವಾಭಿಮಾನಿಯಾಗಿ ಎಲ್ಲರ ಮನಸ್ಸು ಗೆದ್ದಿದ್ದೀರಾ.

ಚುನಾವಣೆಗೆ ಸ್ಪರ್ಧಿಸಿ. ನಾವು ಗೆಲ್ಲಿಸಿಕೊಂಡು ಬರುತ್ತೇವೆಂಬ ಭರವಸೆ ಕೊಟ್ಟ ಕಾರಣ ಸ್ಪರ್ಧೆ ಮಾಡಿದ್ದೇನೆ. ಎಲ್ಲರೂ ಬೆಂಬಲಿಸಿ ಗೆಲ್ಲಿಸುತ್ತೀರಾ ಎಂಬ ಭರವಸೆ ಇದೆ. ಕುಟುಂಬ ರಾಜಕಾರಣಕ್ಕೆ ಅಂತ್ಯ ಹಾಡಿ ಸಾಮಾನ್ಯ ಯುವಕನನ್ನು ಲೋಕಸಭೆಗೆ ಕಳುಹಿಸಿಕೊಡಿ ಎಂದು ಮನವಿ ಮಾಡಿದರು.

ಬೆಳಲಗೆರೆ ಗ್ರಾಮದ ಮುಖಂಡರಾದ ದೊಡ್ಡಪ್ಪ, ರಾಕೇಶ, ಪ್ರಕಾಶ ಬೀರೇಶ, ಮಂಜುನಾಥ, ದೊಡ್ಡೇಶ, ಮಂಜುನಾಥ, ರವಿಕುಮಾರ್, ಮೈಲಾರಿ, ಶ್ರೀನಿವಾಸ್, ಚಂದ್ರಪ್ಪ, ಮಂಜು, ದೇವೇಂದ್ರಪ್ಪ ಮತ್ತಿತರರು ಹಾಜರಿದ್ದರು.

# 'ಸ್ವಾಭಿಮಾನಿಯಾಗಿ ಸ್ಪರ್ಧಿಸಿರುವ ನನಗೆ ಮತ ನೀಡಿ'

## ಹೊನ್ನಾಳಿಯಲ್ಲಿ ಪಕ್ಷೇತರ ಅಭ್ಯರ್ಥಿ ವಿನಯ್ ಕುಮಾರ್ ಮನವಿ



ಹೊನ್ನಾಳಿ, ಮೇ 3- ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಜಿ. ಬಿ. ವಿನಯ್ ಕುಮಾರ್ ಇಂದು ಹೊನ್ನಾಳಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಮತಯಾಚನೆ ಮಾಡಿದರು.

ಹೊನ್ನಾಳಿ - ನ್ಯಾಮತಿ ತಾಲ್ಲೂಕಿನ ಸುರಹೊನ್ನೆ ಗ್ರಾಮಕ್ಕೆ ವಿನಯ್ ಕುಮಾರ್ ಬರುತ್ತಿದ್ದಂತೆ ಗ್ರಾಮದ ನೂರಾರು ಯುವಕರು ಬಿಸಿಲಿನ ಝಳದ ನಡುವೆಯೂ ರೋಡ್ ಶೋನಲ್ಲಿ ಪಾಲ್ಗೊಂಡು ಬೆಂಬಲ ಸೂಚಿಸಿದರು.

ಈ ವೇಳೆ ಮಾಜಿ ಸೈನಿಕರಾದ ಉಮೇಶ್, ಭೋವಿ ಸಮಾಜದ ಅಧ್ಯಕ್ಷ ನಾಗರಾಜಪ್ಪ, ಮಾದನಬಾವಿ ಕರಿಬಸಪ್ಪ, ಚನ್ನೇಶ್, ದೊಡ್ಡೆತ್ತಿನಹಳ್ಳಿ ಕರಿಬಸಪ್ಪ, ತಗ್ಗಿನಹಳ್ಳಿ ನಾಗೇಶ, ಗಣೇಶ, ಹಿರೇಗೋಣಿಗೆರೆ ಗ್ರಾಮದ ಹನುಮಂತು, ಹುಲುಗೇಶ್ ಮತ್ತಿತರರು ಹಾಜರಿದ್ದರು.

ಬಹಿರಂಗ ಸಭೆಯನ್ನುದ್ದೇಶಿಸಿ ಮಾತನಾಡಿದ ವಿನಯ್ ಕುಮಾರ್, ದಾವಣಗೆರೆ ಜಿಲ್ಲೆಯಲ್ಲಿ ಎರಡು ಕುಟುಂಬದವರಿಗೆ ಮಾತ್ರ ಅಧಿಕಾರ ಸಿಕ್ಕಿದೆ. ಈ ಬಾರಿ ಸ್ವಾಭಿಮಾನಿಯಾಗಿ, ನಿಮ್ಮೆಲ್ಲರ ಪ್ರತಿನಿಧಿಯಾಗಿ ಸ್ಪರ್ಧಿಸಿದ್ದೇನೆ. ಅಭಿವೃದ್ಧಿಗಾಗಿ, ಕುಟುಂಬ ರಾಜಕಾರಣಕ್ಕೆ ಅಂತ್ಯ ಹಾಡಲು ನನಗೆ ಮತ ಚಲಾಯಿಸಿ ಎಂದು ಮನವಿ ಮಾಡಿದರು.

ನನ್ನ ಗುರುತು ಗ್ಯಾಸ್ ಸಿಲಿಂಡರ್ ಚಿಹ್ನೆ. ಕ್ರಮ ಸಂಖ್ಯೆ 28. ನೀವೂ ಮತ ಹಾಕಿ. ಒಬ್ಬರು ಕನಿಷ್ಠ ಎಂದರೂ 300 ಮತಗಳನ್ನು ಹಾಕಿಸಿ. ಈ ಭಾಗದ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯುವ ಕೆಲಸ ಮಾಡುವ ಜೊತೆಗೆ ಪರಿಹರಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ದಾಗಿನಕಟ್ಟೆ ಗ್ರಾಮದ ಸಂಗಾಹಳ್ಳಿ ಕರಿಬಸಪ್ಪ, ಯಲೋದಹಳ್ಳಿ ಕೆ. ಎಸ್. ರಾಜಪ್ಪ, ಸಂಗಾಹಳ್ಳಿ ರಾಮಚಂದ್ರಪ್ಪ, ಪರಮೇಶ, ಸತೀಶ, ಹನುಮಂತ, ರಾಜೇಶ, ಸುರೇಶ ಮತ್ತಿತರರು ಉಪಸ್ಥಿತರಿದ್ದರು.

# ಮುಕ್ತೇನಹಳ್ಳಿ ದೇವಿಕುಮಾರ್ ಕಾಂಗ್ರೆಸ್‌ಗೆ ಬೆಂಬಲ



ದಾವಣಗೆರೆ, ಮೇ 3- ಮುಕೇನಹಳ್ಳಿಯ ಗ್ರಾಮಸ್ಥರು ಹಾಗೂ ತಿಮ್ಮನಹಳ್ಳಿಯ ವಕೀಲರಾದ ದೇವಿಕುಮಾರ್, ರುದ್ರಪ್ಪ ಅವರು ಸಿಎಂ ಸಿದ್ದರಾಮಯ್ಯನವರ ನಾಯಕತ್ವವನ್ನು ಒಪ್ಪಿ, ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಹೆಚ್. ಎಂ. ರೇವಣ್ಣ ನೇತೃತ್ವದಲ್ಲಿ ಬೆಂಬಲವನ್ನು ಸೂಚಿಸಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಚ್.ಬಿ.ಮಂಜಪ್ಪ, ವೆಂಕಟೇಶ್, ರಾಮಚಂದ್ರಪ್ಪ, ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ಎಸ್.ಎಸ್.ಗಿರೀಶ್, ಕೆ ರೇವಣ್ಣ, ದಯಾನಂದ್ ಎಚ್.ಡಿ., ಊರಿನ ಗ್ರಾಮಸ್ಥರು ಉಪಸ್ಥಿತರಿದ್ದರು.

# ನಗರದಲ್ಲಿ ಇಂದು ಗೀತ ಗಾಯನ ತರಬೇತಿ ಶಿಬಿರ ಉದ್ಘಾಟನೆ


ದಾವಣಗೆರೆ : ನಗರದ ಶರಧಿ ಕಲಾ ಸಾಂಸ್ಕೃತಿಕ ಸಂಸ್ಥೆ ಮತ್ತು ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಆರ್. ಹೆಚ್.ಗೀತಾ ಮಂದಿರದಲ್ಲಿ ಇಂದು ಬೆಳಗ್ಗೆ 10ಕ್ಕೆ ವಸಂತ ಋತು ಬೇಸಿಗೆ ರಜೆ ಪ್ರಯುಕ್ತ ಗೀತಾ ಗಾಯನ ತರಬೇತಿ ಶಿಬಿರ ನಡೆಯಲಿದೆ ಎಂದು ಕಲಾಕುಂಚದ ಅಧ್ಯಕ್ಷ ಕೆ.ಎಚ್. ಮಂಜುನಾಥ್ ತಿಳಿಸಿದ್ದಾರೆ.

ನಾಡಿನ ಖ್ಯಾತ ಸಂಗೀತ ನಿರ್ದೇಶಕರೂ, ಹಿರಿಯ ಗಾಯಕರಾದ ಬೆಂಗಳೂರಿನ ಉಪಾಸನಾ ಮೋಹನ್ ಸಮಾರಂಭ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಶರಧಿ ಕಲಾ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ವಿದುಷಿ ಶ್ರೀಮತಿ ಶೋಭಾರಂಗನಾಥ್ ವಹಿಸಿಕೊಳ್ಳಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ದಾವಣಗೆರೆ ಜಿಲ್ಲಾಧ್ಯಕ್ಷ ಸಾಲಿಗ್ರಾಮ ಗಣೇಶ್‌ಶೆಣೈ, ದೂರದರ್ಶನ ಆಕಾಶವಾಣಿ ಕಲಾವಿದ ಅಜಯ್ ನಾರಾಯಣ್, ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ಹರಿಹರ ತಾಲ್ಲೂಕು ಘಟಕದ ಅಧ್ಯಕ್ಷರಾದ ಹಿರಿಯ ಗಾಯಕಿ ಶ್ರೀಮತಿ ಮಾಧುರಿ ಶೇಷಗಿರಿ, ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ್‌ಶೆಣೈ, ಸಂಗೀತಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಸಮಾರಂಭವನ್ನು ಯಶಸ್ವಿಗೊಳಿಸಬೇಕಾಗಿ ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಶೈಲಾ ವಿಜಯಕುಮಾರ್ ವಿನಂತಿಸಿದ್ದಾರೆ.

# ಶೋಷಿತ ವರ್ಗಗಳ ಏಳಿಗೆಗೆ ಕಾಂಗ್ರೆಸ್ ಅವಶ್ಯಕ

## ಜಗಳೂರು ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಬಿ.ಮಹೇಶ್ವರಪ್ಪ



ಜಗಳೂರು, ಮೇ 3 - ಶೋಷಿತ ವರ್ಗಗಳ ಏಳಿಗೆಗೆ ಕಾಂಗ್ರೆಸ್ ಆಡಳಿತ ಅವಶ್ಯಕ ಎಂದು ಬ್ಲಾಕ್ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಬಿ.ಮಹೇಶ್ವರಪ್ಪ ಅಭಿಪ್ರಾಯಿಸಿದರು.

ಗುರುವಾರ ತಾಲ್ಲೂಕಿನ ಕ್ಯಾಸೇನಹಳ್ಳಿ, ಸೊಕ್ಕೆ, ತಾರೇಹಳ್ಳಿ ಸೇರಿದಂತೆ ಎಸ್‌ಸಿ ಕಾಲೋನಿಗಳಲ್ಲಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ಪರ ಮತಯಾಚನೆ ನಡೆಸಿ ಮಾತನಾಡಿದರು.


ದೇಶದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬಂದರೆ ಬಡ, ಶೋಷಿತ ವರ್ಗಗಳ ಕುಟುಂಬದ ನಿರುದ್ಯೋಗಿ ಯುವಕರಿಗೆ ಉದ್ಯೋಗ, ರೈತರಿಗೆ ಸಾಲ ಮನ್ನಾ, ಪ್ರತಿಯೊಬ್ಬ ಮಹಿಳೆಯರಿಗೆ ಪ್ರತಿ ವರ್ಷ 1 ಲಕ್ಷ, ಮನರೇಗಾ ಯೋಜನೆಯಡಿ ಕೂಲಿ ಕನಿಷ್ಠ ವೇತನ 400 ಗ್ಯಾರಂಟಿ ಕಾರ್ಡ್ ಯೋಜನೆ ಸಮರ್ಪಕವಾಗಿ ಜಾರಿಗೊಳಿಸಲಾಗುತ್ತದೆ. ರಾಜ್ಯದಲ್ಲಿ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳು ಎಲ್ಲಾ ವರ್ಗದವರಿಗೆ ವರದಾನವಾಗಿದ್ದು ಪಕ್ಷದ ಗೆಲುವಿಗೆ ಅನುಕೂಲವಾಗಿದೆ ಎಂದು ತಿಳಿಸಿದರು.

ದೇಶದ ಸಂವಿಧಾನದ ಉಳಿವಿಗಾಗಿ ಕಾಂಗ್ರೆಸ್ ಪಕ್ಷದ ಆಡಳಿತ ಅನಿವಾರ್ಯ. ಸಂವಿಧಾನಬದ್ಧ ಹಕ್ಕುಗಳನ್ನು ಸದ್ಬಳಕೆ ಮಾಡಿಕೊಂಡು ದಲಿತ ಸಮುದಾಯಗಳು ಸಮಾಜದ ಮುಖ್ಯವಾಹಿನಿಗೆ ಬರಬೇಕಿದೆ ಎಂದು ಕರೆ ನೀಡಿದರು.

ಸಂದರ್ಭದಲ್ಲಿ ಜಿ.ಪಂ ಮಾಜಿ ಸದಸ್ಯ ಛಲವಾದಿ ಸಮಾಜದ ಗೌರವ ಅಧ್ಯಕ್ಷ ಸಿ.ಲಕ್ಷ್ಮಣ, ತಾಲ್ಲೂಕು ಅಧ್ಯಕ್ಷ ನಿಜಲಿಂಗಪ್ಪ, ಮಾದಿಹಳ್ಳಿ ಮಂಜುನಾಥ್, ಗ್ರಾ.ಪಂ ಸದಸ್ಯರಾದ ಸೊಕ್ಕೆ ರಾಜು, ಭರಮಸಮುದ್ರ ತಿಪ್ಪೇಸ್ವಾಮಿ, ಮಾಜಿ ಸದಸ್ಯ ಚಂದ್ರಪ್ಪ, ಶ್ರೀನಿವಾಸ್, ತಿಪ್ಪೇಸ್ವಾಮಿ ಮುಂತಾದವರು ಇದ್ದರು.

# ಮೋದಿ ಅಲೆ ಎಲ್ಲೂ ಇಲ್ಲ : ಹೆಚ್.ಎಂ.ರೇವಣ್ಣ

ದಾವಣಗೆರೆ, ಮೇ 3- ಮೋದಿ ಅಲೆ ಎಲ್ಲೂ ಇಲ್ಲ. 2-3 ರಾಜ್ಯ ಹೊರತು ಪಡಿಸಿದರೆ, ಎಲ್ಲವೂ ಆಪರೇಷನ್ ಕಮಲ ಎಂದು ಮಾಜಿ ಸಚಿವ ಎಚ್.ಎಂ. ರೇವಣ್ಣ ಹೇಳಿದರು.



**ಶಕ್ತಿ ಯೋಜನೆಯಿಂದ ಹೆಣ್ಣು ಮಕ್ಕಳು ದಾರಿ ತಪ್ಪುತ್ತಾರೆ ಎಂದ ಮಾಜಿ ಸಿಎಂ ಎಚ್.ಡಿ ಕುಮಾರ ಸ್ವಾಮಿ ಅವರು ತಮ್ಮ ಮನೆಯಲ್ಲಿ ಆಗಿರುವ ಘಟನೆಗೆ ಉತ್ತರ ಕೊಡಲಿ.**

**- ಹೆಚ್.ಎಂ ರೇವಣ್ಣ, ಮಾಜಿ ಸಚಿವ,**

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿದ ಅವರು, ಇಡಿ, ಐಟಿ ಮೂಲಕ ವಿಪಕ್ಷಗಳ ಮೇಲೆ ದಬ್ಬಾಳಿಕೆ ಮಾಡುವ ಬಿಜೆಪಿಯು ರೈತರ ಆದಾಯ ದುಪ್ಪಟ್ಟುಗೊಳಿಸದೇ ಮುಷ್ಕರಕ್ಕೆ ಕುಳಿತ ರೈತರ ಎದೆಗೆ ಗುಂಡು ಹಾರಿಸುವ ಕಾರ್ಯ ಮಾಡಿದೆ ಎಂದು ದೂರಿದರು.

ಈ ಹಿಂದೆ ಕಪ್ಪು ಹಣ ವಾಪಸ್ ತರುತ್ತೇವೆ ಮತ್ತು 2 ಕೋಟಿ ಉದ್ಯೋಗ ಸೃಷ್ಟಿಸುತ್ತೇವೆ ಎಂದ ಪ್ರಧಾನಿ ಮೋದಿ ಅವರು ಸುಳ್ಳು ಭರವಸೆಯ ಮೂಲಕ ದೇಶದ ಜನರಿಗೆ ಮೋಸ ಮಾಡಿದ್ದಾರೆ ಎಂದರು.

ಕಾಂಗ್ರೆಸ್ ನಾಯಕರಾದ ದೇವರಾಜ್ ಅರಸ್ ಹಾಗೂ ಇಂದಿರಾ ಗಾಂಧಿ ಅವರ ಆಡಳಿತದಲ್ಲಿ 20 ಅಂಶದ ಅಭಿವೃದ್ಧಿ ಕಾರ್ಯಗಳು ಇಂದಿಗೂ ಪ್ರಸ್ತುತದಲ್ಲಿವೆ ಎಂದು ಹೇಳಿದರು.

2013ರಲ್ಲಿ ಸಿಎಂ ಸಿದ್ದರಾಮಯ್ಯ ಅವರು ಅನ್ನ ಭಾಗ್ಯ, ಆಶ್ರಯ ಮನೆಯ ಸಾಲ ಹಾಗೂ ನಿಗಮಗಳ ಸಾಲ ಮನ್ನಾ ಮಾಡುವ ಜತೆಗೆ ಭಾಗ್ಯ ಜ್ಯೋತಿಯಂತಹ ಜನಪರ ಯೋಜನೆಗಳನ್ನು ಕೊಟ್ಟಿದ್ದಾರೆ ಎಂದರು.

ಇಂದು ಸಿ.ಎಂ ಸಿದ್ದರಾಮಯ್ಯ ಅವರು ಪಂಚ ಗ್ಯಾರಂಟಿಗಳನ್ನು ಪ್ರತಿ ಮನೆಗೂ ತಲುಪಿಸುವ ಜತೆಗೆ ಪ್ರಣಾಳಿಕೆಯ 165 ಅಂಶಗಳ ಪೈಕಿ 160 ನ್ನು ಜಾರಿಗೊಳಿಸಿ ನುಡಿದಂತೆ ನಡೆದಿದ್ದಾರೆ ಎಂದು ಹೇಳಿದರು

ಕಾಂಗ್ರೆಸ್ ಪಕ್ಷವು ಹಿಂದಿನಿಂದಲೂ ಜನರ ಕಾಳಜಿ ಮಾಡುತ್ತಿದೆ. ಆದ್ದರಿಂದ ಸಂವಿಧಾನ ಬದಲಿಸಲು ಹೊರಟ ಬಿಜೆಪಿಯಿಂದ ದೇಶ ರಕ್ಷಿಸಲು ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಬೇಕು ಎಂದರು.

ಈ ವೇಳೆ ಪಕ್ಷದ ಹಿರಿಯ ನಾಯಕ ರಾಮಚಂದ್ರಪ್ಪ, ಮಡಿವಾಳ ಸಮಾಜದ ರಾಜ್ಯಾಧ್ಯಕ್ಷ ನಂಜಪ್ಪ, ಮಾಜಿ ಶಾಸಕ ಎಸ್. ರಾಮಪ್ಪ, ವೆಂಕಟೇಶ್, ಮುಖಂಡ ನಂದಿಗಾವಿ ಶ್ರೀನಿವಾಸ್, ಗಿರೀಶ್ ಮತ್ತು ಪಕ್ಷದ ಮುಖಂಡರು, ಕಾರ್ಯಕರ್ತರು ಸುದ್ದಿಗೋಷ್ಠಿಯಲ್ಲಿದ್ದರು.

# ಇಂದು ಶ್ರೀಶೈಲ ಜಗದ್ಗುರುಗಳ ಇಷ್ಟ ಲಿಂಗಪೂಜೆ



ದಾವಣಗೆರೆ ಶ್ರೀಶೈಲ ಜಗದ್ಗುರು ಡಾ. ಚನ್ನ ಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಇಷ್ಟಲಿಂಗ ಪೂಜೆಯನ್ನು ಇಂದು ಸಂಜೆ ನಗರದ ಹಿರಿಯ ಪತ್ರಕರ್ತ ಆರ್.ಎಸ್. ತಿಪ್ಪೇಸ್ವಾಮಿ ದುಗ್ಗತ್ತಿಮಠ ಇವರ ಮನೆಯಲ್ಲಿ ಆಯೋಜಿಸಲಾಗಿದೆ.


**ದಾವಣಗೆರೆ ಲೋಕಸಭಾ ಚುನಾವಣೆ-2024**

**ದಿನಾಂಕ : 07.05.2024ನೇ ಮಂಗಳವಾರ**



ಮಾನ್ಯ ಮತದಾರ ಬಂಧುಗಳೇ,

ದಿನಾಂಕ : 7.5.2024ನೇ ಮಂಗಳವಾರದಂದು ನಡೆಯಲಿರುವ ದಾವಣಗೆರೆ ಲೋಕಸಭಾ ಕ್ಷೇತ್ರದಿಂದ "ಪಕ್ಷೇತರ ಅಭ್ಯರ್ಥಿ"ಯಾಗಿ ಸ್ಪರ್ಧಿಸಿರುತ್ತೇನೆ. ದಾವಣಗೆರೆ ಲೋಕಸಭಾ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಲು ಕಂಕಣಬದ್ಧನಾಗಿದ್ದೇನೆ. ವಿಶೇಷವಾಗಿ ರೈತ ಬಂಧುಗಳು ಮತ್ತು ತಾಯಂದಿರಲ್ಲಿ ವಿನಮ್ರ ವಿನಂತಿ. ನನ್ನ ಗುರುತಾದ "ಕೇರಂ ಬೋರ್ಡ್" ಚಿಹ್ನೆಗೆ ತಮ್ಮ ಅಮೂಲ್ಯವಾದ ಮತವನ್ನು ನೀಡುವ ಮೂಲಕ ನನ್ನನ್ನು ಪ್ರಚಂಡ ಬಹುಮತದಿಂದ ಜಯಶೀಲನನ್ನಾಗಿಸಿ ಕ್ಷೇತ್ರದ ಅಭಿವೃದ್ಧಿಗೆ ಅವಕಾಶ ಕಲ್ಪಿಸಿಕೊಡಬೇಕೆಂದು ವಿನಂತಿಸಿಕೊಳ್ಳುತ್ತೇನೆ.

*ತಮ್ಮ ಸೇವಾಕಾಂಕ್ಷಿ*

**ಎಸ್. ಪೆದ್ದಪ್ಪ**

| ಕ್ರ.ಸಂ. | ಅಭ್ಯರ್ಥಿಯ ಹೆಸರು | ಚಿಹ್ನೆ | ಮತದಾನ |
|---|---|---|---|
| 20 | ಎಸ್. ಪೆದ್ದಪ್ಪ | | |

## ಲೋಕಸಭಾ ಚುನಾವಣೆ : ಜಿಲ್ಲೆಯಲ್ಲಿ ನಾಳೆ ನಿಷೇದಾಜ್ಞೆ

ದಾವಣಗೆರೆ, ಮೇ 3 - ಲೋಕಸಭಾ ಚುನಾವಣೆ ಮತದಾನವು ಇದೇ ದಿನಾಂಕ 7 ರಂದು ನಡೆಯಲಿದ್ದು, ಮುಕ್ತ, ನ್ಯಾಯ ಸಮ್ಮತ, ಪಾರದರ್ಶಕ, ಸಾರ್ವಜನಿಕ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ನಾಡಿದ್ದು ದಿನಾಂಕ 5ರ ಸಂಜೆ 6 ರಿಂದ ದಿನಾಂಕ 7 ರಂದು ಮತದಾನ ಮುಕ್ತಾಯವಾಗುವವರೆಗೂ ಜಿಲ್ಲೆಯಾದ್ಯಂತ 144 ಸೆಕ್ಷನ್ ಅನ್ವಯ ಎಲ್ಲಾ ಮತಗಟ್ಟೆಗಳ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿ ಡಾ. ಎಂ.ವಿ. ವೆಂಕಟೇಶ್ ಆದೇಶಿಸಿದ್ದಾರೆ.

ಮತದಾರರನ್ನು ಹೊರತುಪಡಿಸಿ 5 ಜನರಿಗಿಂತ ಹೆಚ್ಚು ಗುಂಪು ಸೇರುವಂತಿಲ್ಲ, ಯಾವುದೇ ರಾಜಕೀಯ, ಧಾರ್ಮಿಕ ಮೆರವಣಿಗೆ ಮಾಡುವಂತಿಲ್ಲ, ಶಸ್ತ್ರಾಸ್ತ್ರಗಳು, ಮಾರಕಾಸ್ತ್ರ, ದೊಣ್ಣೆ, ಕಲ್ಲು, ಚಾಕು, ಇಟ್ಟಿಗೆ, ಕೋಲು ಸೇರಿದಂತೆ ದೈಹಿಕ ಹಿಂಸೆ ಮಾಡಬಲ್ಲ ಯಾವುದೇ ಆಯುಧಗಳನ್ನು ತೆಗೆದುಕೊಂಡು ಓಡಾಡುವಂತಿಲ್ಲ. ಪ್ರಚೋದನಾಕಾರಿ ಭಾಷಣ, ಸಭೆ ಸಮಾರಂಭಗಳನ್ನು ಮಾಡುವುದು ನಿಷೇಧಿಸಲಾಗಿದೆ. ಮತಗಟ್ಟೆಯೊಳಗೆ ಮೊಬೈಲ್, ಕಾರ್ಡ್‌ಲೆಸ್ ಫೋನ್ ಸೇರಿದಂತೆ ಇನ್ನಿತರೆ ಎಲೆಕ್ಟ್ರಾನಿಕ್ಸ್ ವಸ್ತುಗಳನ್ನು ತೆಗೆದುಕೊಂಡು ಹೋಗುವಂತಿಲ್ಲ. ಕ್ಷೇತ್ರದಲ್ಲದವರು ಕ್ಷೇತ್ರದಿಂದ ಹೊರ ಹೋಗಿರಬೇಕು ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ಮೈಸೂರು ಅರಸರಂತೆ ಮೋದಿ ಆಡಳಿತದಲ್ಲಿ ಸುವರ್ಣ ಯುಗ

ದಾವಣಗೆರೆ, ಮೇ 3 - ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಪರ ಮೈಸೂರು ರಾಜವಂಶದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಇಂದು ನಗರದಲ್ಲಿ ಬೃಹತ್ ರೋಡ್ ಶೋ ನಡೆಸುವ ಮೂಲಕ ಮತಯಾಚನೆ ಮಾಡಿದರು.

ನಗರ ದೇವತೆ ದುಗ್ಗಮ್ಮ ದೇವಿ ದೇವಾಲಯಕ್ಕೆ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಜೊತೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಬೆಣ್ಣೆದೋಸೆ ಸವಿದು ಗಾಯತ್ರಿ ಸಿದ್ದೇಶ್ವರ ಪರ ದಾವಣಗೆರೆ ಉತ್ತರ, ದಕ್ಷಿಣದಲ್ಲಿ ರೋಡ್ ಶೋ ನಡೆಸಿ, ಮತಯಾಚಿಸಿದರು.



ಗಾಯತ್ರಿ ಸಿದ್ದೇಶ್ವರ ಪರ ರೋಡ್ ಶೋ

ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಒಡೆಯರ್, ಅಲ್ಲಿ ನರೇಂದ್ರ ಮೋದಿ ಅವರು ಪ್ರಧಾನಿ ಆಗಬೇಕು ಅಂದರೆ, ಇಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲಬೇಕು ಎಂದು ಕರೆ ನೀಡಿದರು.

ಇಡೀ ದೇಶದಲ್ಲಿ ಬಿಜೆಪಿ ಪರ ಅಲೆ ಇದೆ. ನರೇಂದ್ರ ಮೋದಿ ಅವರು ಪ್ರಧಾನಿ ಆಗುವುದು, ರಾಜ್ಯದಲ್ಲಿ 28 ಬಿಜೆಪಿ ಅಭ್ಯರ್ಥಿಗಳು ಗೆಲ್ಲುವುದು ಖಚಿತ ಎಂದರು.

ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಮಾತನಾಡಿ, ಕಾಂಗ್ರೆಸ್ ಅಭ್ಯರ್ಥಿಯ ಪತಿ ಜಿಲ್ಲಾ ಉಸ್ತುವಾರಿ ಸಚಿವರಾದರೂ ದಕ್ಷಿಣ ಭಾಗಕ್ಕೆ ಒಂದು ಸುಸಜ್ಜಿತವಾದ ಆಸ್ಪತ್ರೆ, ವಿದ್ಯಾಕೇಂದ್ರ, ಕೈಗಾರಿಕೆ ಆರಂಭಕ್ಕೆ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಬಿಜೆಪಿ ಮುಖಂಡ ಲೋಕಿಕೆರೆ ನಾಗರಾಜ್, ಬಿಜೆಪಿ ಯುವ ಮುಖಂಡ ಜಿ.ಎಸ್.ಅನಿತ್ ಕುಮಾರ್, ಪಾಲಿಕೆ ಮಾಜಿ ಮೇಯರ್ ಎಸ್. ಟಿ.ವೀರೇಶ್, ಯಶವಂತರಾವ್ ಜಾಧವ್, ವಿಠಲ್, ಗಂಗಾಧರ, ಹಾಲೇಶ್, ವೀರೇಶ್, ಬಿ.ಎಸ್. ಜಗದೀಶ್ ಮತ್ತಿತರರು ರೋಡ್ ಶೋದಲ್ಲಿ ಪಾಲ್ಗೊಂಡಿದ್ದರು.

### ರಾಜ್ಯದ 28 ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲುವ ವಿಶ್ವಾಸ : ಯದುವೀರ್ ಒಡೆಯರ್

ಮೈಸೂರು ಅರಸರ ಪ್ರತಿಧ್ವನಿಯಂತೆ ಕೇಂದ್ರದ ನರೇಂದ್ರ ಮೋದಿ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ. ಮೈಸೂರು ಅರಸರ ಕಾಲದಲ್ಲಿ ಕನ್ನಡದ ಪರಂಪರೆ ಉಳಿಸುವ ಜೊತೆ ಆಧುನಿಕ ಅಭಿವೃದ್ಧಿ ಕೈಗೊಳ್ಳಲಾಗಿತ್ತು. ಅದೇ ರೀತಿ ಮೋದಿಯವರು ಭಾರತದ ಪರಂಪರೆ ಜೊತೆಗೆ ದೇಶದ ಅಭಿವೃದ್ಧಿ ಮಾಡುತ್ತಿದ್ದಾರೆ ಎಂದು ಮೈಸೂರು ರಾಜವಂಶದ ಯದುವೀರ ಒಡೆಯರ್ ಹೇಳಿದರು.

500 ವರ್ಷಗಳ ನಂತರ ರಾಮ ಜನ್ಮಭೂಮಿ ದೇವಾಲಯ ನಿರ್ಮಾಣವಾಗಿದೆ. ಆಧುನಿಕ ಯೋಗವನ್ನು ವಿಶ್ವಕ್ಕೆ ತಲುಪಿಸಿದ್ದಾರೆ. ಇದರ ಜೊತೆಗೆ ಹೆದ್ದಾರಿ, ರೈಲ್ವೆ, ಶಿಕ್ಷಣ ಸೇರಿದಂತೆ ಹಲವಾರು ವಲಯಗಳಲ್ಲಿ ಕಳೆದ 65 ವರ್ಷಗಳಲ್ಲೇ ಕಾಣದ ಅಭಿವೃದ್ಧಿ ಮಾಡಿದ್ದಾರೆ ಎಂದು ಒಡೆಯರ್ ವಿವರಿಸಿದರು. ಮೈಸೂರು ಅರಸರ ಸುವರ್ಣ ಯುಗ ಆ ಕಾಲದಲ್ಲಿತ್ತು. ಈಗ ಮೋದಿ ಭಾರತಕ್ಕೆ ಸುವರ್ಣ ಯುಗ ತರುತ್ತಿದ್ದಾರೆ. ಪಾಶ್ಚಾತ್ಯದ ದೇಶಗಳನ್ನೂ ಮೀರುವಂತೆ ವಿಕಸಿತ ಭಾರತವನ್ನು ರೂಪಿಸುವತ್ತ ಶ್ರಮಿಸುತ್ತಿದ್ದಾರೆ ಎಂದರು.

# ಹೈಕೋರ್ಟ್ ಮಾದರಿಯಲ್ಲೇ ನಗರದಲ್ಲೂ ಕೋರ್ಟ್ ನಿರ್ಮಾಣದ ಕನಸು : ಎಸ್ಸೆಸ್ಸೆಂ



ದಾವಣಗೆರೆ, ಮೇ 3- ಬೆಂಗಳೂರಿನ ಹೈಕೋರ್ಟ್, ಹಾಸನ, ಬಳ್ಳಾರಿಯ ಜಿಲ್ಲಾ ಕೋರ್ಟ್‌ಗಳ ಮಾದರಿಯಲ್ಲಿ ದಾವಣಗೆರೆ ಜಿಲ್ಲೆಯಲ್ಲಿಯೂ ಕೋರ್ಟ್ ನಿರ್ಮಿಸುವ ಕನಸು ಹೊತ್ತಿರುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಶಾಮನೂರು ಮಲ್ಲಿಕಾರ್ಜುನ್ ತಿಳಿಸಿದರು.

ನಗರದ ಜಿಲ್ಲಾ ವಕೀಲರ ಸಂಘದ ಭವನದಲ್ಲಿ ಇಂದು ಏರ್ಪಾಡಾಗಿದ್ದ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ವ್ಯಕ್ತಪಡಿಸುವ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ತಾನು ಈ ಹಿಂದೆ ಸಚಿವನಾಗಿದ್ದ ಸಂದರ್ಭದಲ್ಲೇ ಕಂಡಿದ್ದ ಈ ಕನಸನ್ನು ಮುಂದೆ ಬಂದ ಬಿಜೆಪಿಯವರು ಹಾಳು ಮಾಡಿದರು ಎಂದು ಹೇಳಿದ ಎಸ್ಸೆಸ್ಸೆಂ, ಬರುವ ದಿನಗಳಲ್ಲಿ ಕೆಹೆಚ್‌ಬಿ ಕಾಲೋನಿಯಲ್ಲಿನ ಕೋರ್ಟನ್ನು ಅತ್ಯುತ್ತಮ ರೀತಿಯಲ್ಲಿ ಅಭಿವೃದ್ಧಿಪಡಿಸಲಾಗು ವುದು. ವಕೀಲರ ಬೇಡಿಕೆಗಳನ್ನು ಹಂತ - ಹಂತವಾಗಿ ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ವಕೀಲರನ್ನುದ್ದೇಶಿಸಿ ಮಾತನಾಡಿದ ಅವರು, ನಿಜವಾದ ರಾಜಕಾರಣಿ ಎಂದರೆ ಬುದ್ದಿವಂತರಾದ ವಕೀಲರು. ಸಿಎಂ ಸಿದ್ದರಾಮಯ್ಯ ಅವರೂ ಸಹ ವಕೀಲರಾಗಿ ಹೋರಾಟದ ಮೂಲಕ ಮುಖ್ಯಮಂತ್ರಿಯಾಗಿದ್ದಾರೆ ಎಂದು ಹೇಳಿದರು.

ಜಿಂಕೆ ಸಾಕಿದ್ದಾರೆ, ಅದು ಮಾಡಿದ್ದಾರೆ, ಇದು ಮಾಡಿದ್ದಾರೆ ಎಂದು ನನ್ನ ಪ್ರತಿಷ್ಠೆ ಡ್ಯಾಮೇಜ್ ಮಾಡಲು ಬಿಜೆಪಿ ಅಪಪ್ರಚಾರ ಮಾಡಿತು ಎಂದು ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ದೂರಿದರು.

ಬಿಜೆಪಿಯವರು ನನ್ನನ್ನು ಟಾರ್ಗೆಟ್ ಮಾಡಿದರು. ಏನೂ ಮಾಡಲಿಕ್ಕಾಗದೇ ಜಿಂಕೆ ಸಾಕಿದ್ದಾರೆ, ಪ್ರಾಣಿ ಸಾಕಿದ್ದಾರೆ ಎಂದು ಸಣ್ಣತನ ತೋರಿದರು. ಅದಕ್ಕೆಲ್ಲ ಕೋರ್ಟ್ ಉತ್ತರ ಕೊಟ್ಟಿದೆ. ನಾವೇನು ಸಾಕಿದ್ದೇವೆ ಎಂಬುದಕ್ಕೆ ಎಲ್ಲಾ ದಾಖಲೆಗಳಿವೆ. ಸುಖಾಸುಮ್ಮನೆ ಬಿಜೆಪಿಯವರು ಆರೋಪ ಮಾಡುವುದು ಸರಿಯಲ್ಲ ಎಂದರು.

ಕೋವಿಡ್ ಲಸಿಕೆ ವಿತರಣೆಯಲ್ಲಿಯೂ ಭ್ರಷ್ಟಾಚಾರ ಮಾಡಿದರು. ಇದಕ್ಕೆ ಚಿಕ್ಕಬಳ್ಳಾಪುರದ ಮಾಜಿ ಸಚಿವ ಸುಧಾಕರ್ ಸುಳ್ಳು ಬಿಲ್ ಸಾಕ್ಷಿ. ದಾವಣಗೆರೆ ಜಿಲ್ಲೆಯಲ್ಲಿ ಕೋವಿಡ್ ಲಸಿಕಾರಣದಲ್ಲಿಯೂ ಬಡ ರೋಗಿಗಳು, ಕಷ್ಟದಲ್ಲಿರುವವರನ್ನು ನೋಡದೇ ರಾಜಕೀಯ ಮಾಡಿದರು. ಇದೆಲ್ಲವನ್ನೂ ಬಿಟ್ಟು ಜಿಲ್ಲೆಯ ಅಭಿವೃದ್ಧಿ ಕಡೆ ಗಮನ ಹರಿಸಿ ಎಂದು ಬಿಜೆಪಿಗರಿಗೆ ಕಿವಿಮಾತು ಹೇಳಿದರು.

ದೇಶದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಬಡವರಿಗೆ ಬದುಕಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿ ಶ್ರೀಮಂತರು ಇನ್ನಷ್ಟು ಶ್ರೀಮಂತರಾಗುತ್ತಿದ್ದಾರೆ. ನಿರುದ್ಯೋಗ ಸಮಸ್ಯೆ ಮಿತಿ ಮೀರುತ್ತಿದೆ. ಕಾಂಗ್ರೆಸ್ ಸರ್ಕಾರದ ಯೋಜನೆಗಳಿಂದ ಬಡವರಿಗೆ ಮಧ್ಯಮ ವರ್ಗದವರಿಗೆ ಸಹಕಾರಿಯಾಗಿದೆ. ಹಿಂದೆ ವಿಧಾನಸಭಾ ಚುನಾವಣೆಯಲ್ಲಿ ನೀಡಿದ ಸಹಕಾರದಂತೆ ಈ ಬಾರಿಯೂ ವಕೀಲರ ಸಹಕಾರ ಅಗತ್ಯ ಎಂದರು.

ಆರೋಗ್ಯ ಪರ ಕಾಳಜಿಯುಳ್ಳ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಈ ಬಾರಿ ಕಣದಲ್ಲಿದ್ದು ಅವರಿಗೆ ಮತವನ್ನು ನೀಡಿ ಅವರನ್ನು ಲೋಕಸಭೆಗೆ ಕಳುಹಿಸಿಕೊಡಬೇಕು ಎಂದು ಸಚಿವರು ಕೇಳಿಕೊಂಡರು.

ಈ ವೇಳೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್, ಅನೀಸ್ ಪಾಷಾ, ಆವರಗೆರೆ ಎಸ್. ಪರಮೇಶ್, ರಾಮಚಂದ್ರ ಕಲಾಲ್, ಬಿ.ಎಂ.ಹನುಮಂತಪ್ಪ, ಲೋಕಿಕೆರೆ ಪ್ರದೀಪ್, ರಂಗಸ್ವಾಮಿ, ಭಾಗ್ಯಲಕ್ಷ್ಮಿ, ಲಕ್ಕಪ್ಪ, ರಜ್ವಿಖಾನ್, ಜಗದೀಶ್, ಶಿವಾನಂದಪ್ಪ, ಬಸವರಾಜ್, ವಿ.ಗೋಪಾಲ್, ನಜೀರ್, ಶಾಮ್, ಅಬ್ದುಲ್ ಖಾದರ್, ಎ.ಎಂ.ಹೆಗಡೆ, ಗುರು ಬಸವರಾಜ್ ಹಾಗೂ ಇತರರು ಉಪಸ್ಥಿತರಿದ್ದರು.

## ನಗರದ ಎಸ್.ಬಿ.ಸಿ. ಕಾಲೇಜಿನಲ್ಲಿ ಇಂದು ಪದವಿ ಪ್ರದಾನ

ಶ್ರೀ ವಿನಾಯಕ ಎಜುಕೇಷನ್ ಟ್ರಸ್ಟ್ ವತಿಯಿಂದ ಎಸ್.ಬಿ.ಸಿ. ಪ್ರಥಮ ದರ್ಜೆ ಮಹಿಳಾ ಕಾಲೇಜು ಮತ್ತು ಅಥಣಿ ಸ್ನಾತಕೋತ್ತರ ಕೇಂದ್ರದಲ್ಲಿ ಕಾಲೇಜಿನ ಸಭಾಂಗಣದಲ್ಲಿ ಇಂದು ಬೆಳಿಗ್ಗೆ 10.30ಕ್ಕೆ ಗ್ರಾಜ್ಯುಯೇಷನ್ ಡೇ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಪ್ರೊ. ಬಿ.ಡಿ. ಕುಂಬಾರ್ ಉದ್ಘಾಟಿಸುವರು. ಕೈಗಾರಿಕೋದ್ಯಮಿ ಅಥಣಿ ವೀರಣ್ಣ ಅಧ್ಯಕ್ಷತೆ ವಹಿಸುವರು. ಬಿ.ಸಿ. ಉಮಾಪತಿ ಮುಖ್ಯ ಅತಿಥಿಗಳಾಗಿರುವರು.






## ಭರಮಸಾಗರದಲ್ಲಿ ದೇವಿ ಜಾತ್ರೆ



ಭರಮಸಾಗರ, ಮೆ 3 - ಗ್ರಾಮದೇವತೆ ಜಾತ್ರಾ ಮಹೋತ್ಸವದಲ್ಲಿ ಉತ್ಸವ ದೇವಿಗೆ ಬೆಳ್ಳಿ ಅಲಂಕಾರ ಮಾಡಿ, ವಿಜೃಂಭಣೆಯಿಂದ ಆಚರಿಸಲಾಯಿತು. ಅರ್ಚಕ ಪಿ.ಎಸ್. ಕೋಕನಾಥ್, ಭರತ್ ಹಾಗೂ ರಾಮಕೃಷ್ಣಪ್ಪ ಅವರು ಪ್ರಸಾದದ ವ್ಯವಸ್ಥೆಯನ್ನು ನಿರ್ವಹಿಸಿದರು. ಸಂಜೆ ಸಿಡಿ ಉತ್ಸವ ನಡೆಯಿತು. ನಾಳೆ ಶನಿವಾರ ಬೆಳಿಗ್ಗೆ 10.30ಕ್ಕೆ ಅಗ್ನಿಕುಂಡ ನಡೆಯುವುದು.

## ಜಿಲ್ಲೆಯಲ್ಲಿ ನಾಳೆಯಿಂದ ಮದ್ಯ ಮಾರಾಟ ನಿಷೇಧ

ದಾವಣಗೆರೆ, ಮೇ 3 - ಲೋಕಸಭಾ ಚುನಾವಣೆಯು ಮೇ 7 ರಂದು ನಡೆಯಲಿದ್ದು, ಮತದಾನ ಮುಕ್ತಾಯವಾಗುವ 48 ಗಂಟೆ ಮೊದಲು ನಾಡಿದ್ದು ದಿನಾಂಕ 5 ರಂದು ಸಂಜೆ 6 ರಿಂದ ದಿನಾಂಕ 7ರ ಸಂಜೆ 7 ರವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾ ದಂಡಾಧಿಕಾರಿ ಡಾ. ಎಂ.ವಿ. ವೆಂಕಟೇಶ್ ಆದೇಶಿಸಿದ್ದಾರೆ.


ssims SPARSH
CENTRE FOR ACCIDENTS BONE & JOINT CARE

ಸ್ಪರ್ಶ್ ಆಸ್ಪತ್ರೆ – ಬೆಂಗಳೂರು, ಇಲ್ಲಿನ ಪ್ರಮುಖ ವೈದ್ಯ ಮತ್ತು ಮಧುಮೇಹ ತಜ್ಞರು
ದಾವಣಗೆರೆ ಸ್ಪರ್ಶ್ ಸೂಪರ್ ಸ್ಪೆಷಾಲಿಟಿ ಕ್ಲಿನಿಕಿನಲ್ಲಿ ಲಭ್ಯರಿರುತ್ತಾರೆ
ಪ್ರತೀ ಹದಿನೈದು ದಿನಗಳಿಗೊಮ್ಮೆ
ನಿಮ್ಮ ದಾವಣಗೆರೆಗೆ ಭೇಟಿ ನೀಡುತ್ತಾರೆ

ಡಾ|| ಸಮಿತ್ ಎ ಶೆಟ್ಟಿ
MBBS, MDRC, PGDD (UK) (Cambridge University)
Consultant Diabetologist

ಇದಕ್ಕಾಗಿ ಸಮಾಲೋಚಿಸಿ:
- ಗರ್ಭಾವಸ್ಥೆಯ ಮಧುಮೇಹ
- ಥೈರೊಯ್ಡ್ ಸಮಸ್ಯೆಗಳು
- ಮಧುಮೇಹದಲ್ಲಿ ಮೂತ್ರಪಿಂಡದ ಕಾಯಿಲೆ
- ಹೃದ್ರೋಗಿಗಳಲ್ಲಿ ಮಧುಮೇಹ
- ನರಮಂಡದ ತೊಂದರೆಗಳು
- ಮಧುಮೇಹಕ್ಕೆ ಸಂಬಂಧಿಸಿದ ನರಗಳ ತೊಂದರೆಗಳು
- ಮಧುಮೇಹಕ್ಕೆ ಸಂಬಂಧಿಸಿದ ಕಣ್ಣಿನ ತೊಂದರೆಗಳು

ದಿನಾಂಕ: ಸೋಮವಾರ, 6ನೇ ಮೇ 2024 । ಸಮಯ: ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ

ಹೊರ ರೋಗಿಗಳ ಕ್ಲಿನಿಕ್ ವಿಳಾಸ : ಎಸ್. ಎಸ್. ಸ್ಪೆಷಾಲಿಟಿ ಕ್ಲಿನಿಕ್, ಮೋದಿ ಕಾಂಪೌಂಡ್, ಎಂ.ಸಿ.ಸಿ. 'ಎ' ಬ್ಲಾಕ್, ಮೋತಿ ವೀರಪ್ಪ ಕಾಲೇಜು ಹತ್ತಿರ, ದಾವಣಗೆರೆ - 577 002

ನೋಂದಣಿಗಾಗಿ ಕರೆಮಾಡಿ: 96869 29090 / 99800 33277

ಸ್ಪರ್ಶ್ ಆಸ್ಪತ್ರೆ ಎಲ್ಲಾ ಆರೋಗ್ಯ ವಿಮಾ (TPA) ಯೋಜನೆಯಡಿಯಲ್ಲಿ ಅಂಗೀಕೃತವಾಗಿದೆ







KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas